ಸಂಪುಟ : 10 ಸಂಚಿಕೆ: 151 ಪುಟ : 4+2 ಬೆಲೆ: 3.00 ಶನಿವಾರ ಜುಲೈ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 151 Pages : 4+2 Price : 3.00 Saturday July 19 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ, ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್

# ಅಸಂಘಟಿತ ಕಾರ್ಮಿಕರ ಜೀವನ ಸುಧಾರಣೆಗೆ ಇಲಾಖೆ ಬದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

'ಶ್ರಮ ಏವ ಜಯತೇ' ಎಂಬ ನುಡಿಯಂತೆ ದೇಶದಲ್ಲಿ ಸಣ್ಣ ಸಣ್ಣ ವೃತ್ತಿಯನ್ನು ಮಾಡಿ ಶ್ರಮ ಜೀವಿಯಾಗಿ ಜೀವನ ನಡೆಸುತ್ತಿರುವ 91 ಅಸಂಘಟಿತ ವರ್ಗಗಳ ಕಾರ್ಮಿಕರಿದ್ದಾರೆ. ಸದರಿ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಅವರ ಜೀವನ ಮಟ್ಟ ಸುಧಾರಣೆಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದ್ದು, ಈ ಯೋಜನೆಯ ಸೌಲಭ್ಯವನ್ನು ಅಸಂಘಟಿತ ಕಾರ್ಮಿಕರು ಪಡೆದುಕೊಳ್ಳಬೇಕೆಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್ ತಿಳಿಸಿದರು.

ನಗರದ ವಿವೇಕಾನಂದ ಸಭಾಂಗಣದಲ್ಲಿ ಶುಕ್ರವಾರ ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ




ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಘಟಿತ ಕಾರ್ಮಿಕರಿಗೆ ದೊರಕುವ ಕಾನೂನಾತ್ಮಕ ಸೌಲಭ್ಯಗಳು ಅಸಂಘಟಿತ ಕಾರ್ಮಿಕರಿಗೂ ಒದಗಿಸಬೇಕೆಂಬುದು ಸರ್ಕಾರದ ಧ್ಯೇಯೋದ್ದೇಶವಾಗಿದೆ. ಅಸಂಘಟಿತ ವಲಯದ ಕಾರ್ಮಿಕರಿಗೆ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ 91 ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಗುರುತಿಸಲಾಗಿದ್ದು, ಸದರಿ ಕಾರ್ಮಿಕರನ್ನು ಉಚಿತವಾಗಿ ನೊಂದಾಯಿಸಿ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಲಾಗುತ್ತಿದೆ. ಸರ್ಕಾರದಿಂದ ಜಾರಿಗೊಂಡಿರುವ ವಿವಿಧ ಸೌಲಭ್ಯಗಳು ಕಾರ್ಮಿಕರಿಗೆ ತಲುಪಬೇಕು. ಈ ನಿಟ್ಟಿನಲ್ಲಿ ವ್ಯಾಪಕ ಪ್ರಚಾರವೂ ಅತ್ಯಗತ್ಯವಾಗಿದೆ ಎಂದರು.

ಅಪಘಾತಗಳಿಂದ 18ರಿಂದ 45 ವರ್ಷ ವಯೋಮಾನದ ಒಳಗಿನ ಶೇ.50 ಜನರು ಮರಣ ಹೊಂದುತ್ತಿದ್ದಾರೆ. ವಾಹನ ಸಂಚಾರಿಗಳ ಸುರಕ್ಷತೆಗಾಗಿ ಹೆಲ್ಮೆಟ್ ಕಡ್ಡಾಯಗೊಳಿಸಬೇಕು. ಅಲ್ಲದೇ ಸಂಚಾರಿ ನಿಯಮಗಳ ಪಾಲನೆಯಾಗಬೇಕು. ಆ ಮೂಲಕ ಜೀವಹಾನಿ ನಿಯಂತ್ರಣವಾಗಲಿ ಎಂದರು.


ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ ಜಿಲ್ಲೆಯ ಅಸಂಘಟಿತ ಕಾರ್ಮಿಕರಿಗೆ 25 ಸ್ಮಾಟ್ ಕಾರ್ಡ್‌ಗಳನ್ನು, 4 ಅಪಘಾತ ಪರಿಹಾರ ಚೆಕ್, 1 ಆಶಾ ದೀಪ ಯೋಜನೆ ಚೆಕ್‌ನ್ನು ಕಾರ್ಮಿಕ ಸಚಿವರು ವಿತರಿಸಿದರು. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಜಂಟಿ ಕಾರ್ಯದರ್ಶಿಗಳು ಹಾಗೂ ಜಂಟಿ ಕಾರ್ಮಿಕ ಆಯುಕ್ತರಾದ ಡಾ. ಎಸ್.ಬಿ. ರವಿಕುಮಾರ್ ಸಂವಿಧಾನ ಪೀಠಿಕೆಯನ್ನು ಬೋಧಿಸಿದರು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ತಾಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗ್ಯಾರಂಟಿ ಸಮಿತಿ ಸದಸ್ಯ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ, ಬರ್ಕತ್‌ಅಲಿ ಮುಲ್ಲಾ, ಗದಗ ಉಪವಿಭಾಗದ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಸಹಾಯಕ ಕಾರ್ಮಿಕ ಆಯುಕ್ತ ಸಚಿನ್ ವೈ.ಹಳೇಮನಿ, ಹಿರಿಯ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ನಿರೀಕ್ಷಕರು, ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರು ಹಾಜರಿದ್ದರು. ಬೆಳಗಾವಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಿ.ಜಿ. ನಾಗೇಶ ಸ್ವಾಗತಿಸಿದರು. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು. ಗದಗ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ 1548ಕ್ಕೂ ಹೆಚ್ಚು ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಯಿತು.

> ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಬಡವರ ಬಗ್ಗೆ ಅಪಾರ ಕಾಳಜಿ ಹೊಂದಿ ರಾಜ್ಯದ ಎಲ್ಲ ಅಸಂಘಟಿತ ಕಾರ್ಮಿಕರನ್ನು ಸಮಾಜದ ಮುಖ್ಯ ವಾಹಿನಿಗೆ ತಂದು ಸಾಮಾಜಿಕ ಭದ್ರತೆ ಒದಗಿಸಿ ಅವರ ಜೀವನ ಮಟ್ಟ ಸುಧಾರಿಸಲು ರಾಜ್ಯ ಸರ್ಕಾರ ಶ್ರಮಿಸುತ್ತಿದೆ. ಅಸಂಘಟಿತ ವಲಯದ ಕಾರ್ಮಿಕರು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ದುರ್ಬಲರಾಗಿದ್ದು, ಸಂಘಟಿತ ಕಾಮಿಕರಿಗೆ ದೊರಕುವ ಎಲ್ಲ ಸೌಲಭ್ಯಗಳು ಅಸಂಘಟಿತ ಕಾರ್ಮಿಕರಿಗೆ ದೊರಕಬೇಕೆಂಬುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

> ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡಜನರ ಬದುಕನ್ನು ಬಂಗಾರವಾಗಿಸಿವೆ. 500 ಕೋಟಿ ಹೆಣ್ಣು ಮಕ್ಕಳು ಶಕ್ತಿ ಯೋಜನೆ ಫಲಾನುಭವಿಗಳಾಗಿದ್ದಾರೆ. ಮಹಿಳೆಯರಿಗೆ ರಾಜ್ಯದ ಮೂಲೆ ಮೂಲೆಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ರಾಜ್ಯ ಸರ್ಕಾರ ಕಲ್ಪಿಸಿದೆ. ಸರ್ಕಾರದಿಂದ ಬಡಜನರ ಶ್ರೇಯೋಭಿವೃದ್ಧಿಗೆ ಪಂಚ ಗ್ಯಾರಂಟಿ ಯೋಜನೆಗಳಿಗೆ ಒಂದು ವರ್ಷಕ್ಕೆ 60 ಸಾವಿರ ಕೋಟಿ ರೂ ವೆಚ್ಚ ಮಾಡಲಾಗುತ್ತಿದೆ.
>
> **– ಸಂತೋಷ ಲಾಡ್.**
> **ಕಾರ್ಮಿಕ ಸಚಿವರು.**

## ತೋಟಪ್ಪ ನಾರಾಯಣಪೂರ ದತ್ತಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜುಲೈ 19ರಂದು ಸಂಜೆ 6.30 ಗಂಟೆಗೆ ತೆ-ೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಇಲ್ಲಿ ಸ್ವಾತಂತ್ರ್ಯ ಹೋರಾಟಗಾರ ತೋಟಪ್ಪರಾಚಪ್ಪ ನಾರಾಯಣಪೂರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಗದಗ ಪರಿಸರದ ಸ್ವಾತಂತ್ರ್ಯ ಹೋರಾಟಕ್ಕೆ ತೋಟಪ್ಪ ನಾರಾಯಣಪೂರ ಅವರ ಕೊಡುಗೆ ಕುರಿತು ಸರಕಾರಿ ಪ್ರಥಮದರ್ಜೆ ಮಹಿಳಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಎಸ್.ಯು. ಸಜ್ಜನಶೆಟ್ಟರ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ದತ್ತಿ ದಾನಿಗಳಾದ ಪ್ರ.ತೋ. ನಾರಾಯಣಪೂರ ಉಪಸ್ಥಿತರಿರುವರು. ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಗೊಜನೂರ ಗ್ರಾಮದಲ್ಲಿ ಇ-ಪೌತಿ ಖಾತಾ ಆಂದೋಲನ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

# ತಮ್ಮ ಆಸ್ತಿಗಳ ಇ-ಖಾತೆ ಮಾಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿ ಜಮೀನಿನ ಮಾಲೀಕರು ಮರಣ ಹೊಂದಿದ ನಂತರ ವಾರಸುದಾರರ ಖಾತೆ ಬದಲಾವಣೆ ಮಾಡಲು ಪೌತಿ-ವಾರಸಾ ಖಾತೆ ಆಂದೋಲನವನ್ನು ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ಅವರು ಶುಕ್ರವಾರ ಸಮೀಪದ ಗೊಜನೂರ ಗ್ರಾಮದ ಸಮುದಾಯ ಭವನದಲ್ಲಿ ನಡೆದ ಇ-ಪೌತಿ ಖಾತಾ ಆಂದೋಲನ ಉದ್ಘಾಟಿಸಿ ಮಾತನಾಡುತ್ತಿದ್ದರು.

ರಾಜ್ಯ ಸರ್ಕಾರ ಪೌತಿ ಖಾತಾ ಆಂದೋಲನ ಆರಂಭಿಸಿದ್ದು, ಸಾರ್ವಜನಿಕರು ತಮ್ಮ ಆಸ್ತಿಗಳ ಇ -ಖಾತೆ ಮಾಡಿಸಿಕೊಳ್ಳಬೇಕು. ಮಾಲೀಕತ್ವವು ಮೃತರ ವಾರಸುದಾರರ ಹೆಸರಿಗೆ ಬದಲಾವಣೆಯಾಗದಿದ್ದಲ್ಲಿ, ಉಂಟಾಗುವ ಸಮಸ್ಯೆಗಳನ್ನು ಪರಿಹರಿಸಲು ಪೌತಿ-ವಾರಸಾ ಸ್ವರೂಪದ ಮ್ಯುಟೇಷನ್ ಪ್ರಕ್ರಿಯೆಯನ್ನು ಸರಳೀಕೃತಗೊಳಿಸಿ ಪೌತಿ-ವಾರಸಾ ಖಾತೆ ಆಂದೋಲನ ನಡೆಸಲಾಗುತ್ತಿದೆ. ಅಂತಹ ವಾರಸುದಾರರಿಗೆ ಸರ್ಕಾರದಿಂದ ಸಿಗಬಹುದಾದ ಹಲವಾರು ಪ್ರಯೋಜನಗಳಿಂದ ಹಾಗೂ ಜಮೀನು



ಅಭಿವೃದ್ಧಿಗೆ ಸಂಬಂಧಿಸಿದ ಸಾಲ ಸೌಲಭ್ಯ, ಬೆಳೆ ಹಾನಿ ಪರಿಹಾರ, ಬೆಳೆ ವಿಮೆಯಂತಹ ಅನೇಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಮೃತರ ವಾರಸುದಾರರ ಮನೆ ಬಾಗಿಲಿಗೆ ಆಗಮಿಸಿ, ಇ-ಪೌತಿ-ವಾರಸಾ ಖಾತೆಯನ್ನು ದಾಖಲಿಸಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರು.

ವಾರಸುದಾರರಿಲ್ಲದೆ ಮೃತಪಟ್ಟವರ ಆಸ್ತಿಗಳು ಸರ್ಕಾರದ ಪಾಲಾಗುತ್ತವೆ. ಮೃತಪಟ್ಟವರ ಸಂಬಂಧಿಕರು ಸರಿಯಾದ ದಾಖಲೆಗಳನ್ನು ತಂದುಕೊಟ್ಟಲ್ಲಿ ಗ್ರಾಮಲೆಕ್ಕಿಗರು ಪರೀಕ್ಷೆ ನಡೆಸಿ ಸೂಕ್ತವೆಂದು ತಿಳಿದು ಬಂದಲ್ಲಿ ಅವರಿಗೆ ಆಸ್ತಿಯಲ್ಲಿ ಹಕ್ಕು ನೀಡುವ ಕಾರ್ಯ ಮಾಡಲಾಗುತ್ತಿದೆ ಎಂದು ಹೇಳಿದರು.

> ಗೊಜನೂರ ಗ್ರಾಮದಲ್ಲಿ ಸುಮಾರು 90ಕ್ಕೂ ಹೆಚ್ಚು ಪೌತಿ ಖಾತೆ ಮಾಡಿಸಿಕೊಳ್ಳುವ ಆಸ್ತಿಗಳು ಇದ್ದು, ಅವರ ಸಂಬಂಧಿಕರು ಸರಿಯಾದ ದಾಖಲೆಗಳನ್ನು ತಂದುಕೊಟ್ಟಲ್ಲಿ ಆ ಖಾತೆಗಳನ್ನು ವಾರಸುದಾರರಿಗೆ ಮಾಡಿಕೊಡಲಾಗುತ್ತದೆ. ಸುಮಾರು 24ಕ್ಕೂ ಹೆಚ್ಚು ಪ್ರಕರಣಗಳು ಮೂರು ತಲೆಮಾರುಗಳಿಂದ ಖಾತಾ ಬದಲಾವಣೆ ಮಾಡಿಕೊಳ್ಳದೆ ಹಾಗೇ ಇದ್ದು, ಅವುಗಳಿಗೆ ಸರಿಯಾದ ದಾಖಲೆಗಳನ್ನು ನೀಡಿ ಸಮಸ್ಯೆ ಪರಿಹಾರ ಮಾಡಿಕೊಳ್ಳಬೇಕು ಎಮದು ಜಿಲ್ಲಾಧಿಕಾರಿಗಳು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಾರ್ವಜನಿಕರು, ರೈತರು, ಮಹಿಳೆಯರು ವಿವಿಧ ವಿಷಯಗಳ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ತಹಸೀಲ್ದಾರ ಧನಂಜಯ ಎಂ, ಕಂದಾಯ ನಿರೀಕ್ಷಕ ಎಂ.ಎ. ನಧಾಪ್, ಗ್ರಾ.ಪಂ ಅಧ್ಯಕ್ಷ ಮಂಜುನಾಥ ಚಲವಾದಿ, ಉಪಾಧ್ಯಕ್ಷ ಮಹಾಂತೇಶಗೌಡ ಪಾಟೀಲ, ಶಿವನಗೌಡ ಪಾಟೀಲ, ಸಿ.ಪಿ. ಮಾಡಳ್ಳಿ, ಶಂಬುಲಿಂಗಪ್ಪ ಸೊರಟೂರ, ಮುತ್ತಣ್ಣ ಶೆಟ್ರು ವಡಕಣ್ಣವರ, ಚನ್ನಪ್ಪ ಷಣ್ಮುಖಿ, ಗ್ರಾಮ ಲೆಕ್ಕಾಧಿಕಾರಿ ನಾಗರಾಜ ಕನೋಜಿ ಹಾಗೂ ಗ್ರಾ.ಪಂ ಸದಸ್ಯರು ಇದ್ದರು.

### ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

## 'ವಿಶೇಷ ನೋಂದಣಿ' ಅಭಿಯಾನ ಜುಲೈ 26,27ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿಗಳಿಂದ ದೂರವಾಗಿರುವ ಅರ್ಹ ಕುಟುಂಬಗಳನ್ನು ಪಂಚ ಗ್ಯಾರಂಟಿ ಯೋಜನೆ ವ್ಯಾಪ್ತಿಗೆ ಸೇರಿಸಲು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಜುಲೈ 26 ಹಾಗೂ 27ರಂದು ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದು, ಅರ್ಹ ಫಲಾನುಭವಿಗಳು ಯೋಜನೆಗಳನ್ನು ಸದುಪಯೋಗಪಡಿಸಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ



ಫೋಟೋ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಹಾಕಲಾಗುವುದು. ಇದುವರೆಗೆ ಪಂಚ ಗ್ಯಾರಂಟಿ ಯೋಜನೆಗಳ ಉಪಯೋಗ ಪಡೆಯದಿರುವ ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ನೀಡಿ ಯೋಜನೆಯ ಸುದಪಯೋಗ ಪಡೆದುಕೊಳ್ಳಬಹುದಾಗಿದೆ.

ಅರ್ಹ ಫಲಾನುಭವಿಗಳು ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿನ ಉಪ ವಿಭಾಗಾಧಿಕಾರಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಜುಲೈ 26 ಹಾಗೂ 27ರಂದು ಬೆಳಿಗ್ಗೆ 10ರಿಂದ ಸಂಜೆ 5ರೊಳಗಾಗಿ ಭೇಟಿ ನೀಡಬಹುದಾಗಿದೆ ಎಂದು ತಿಳಿಸಿದ್ದಾರೆ.

> ಅಭಿಯಾನದಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೋ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಹಾಕಲಾಗುವುದು.
>
> **– ಅಶೋಕ ಮಂದಾಲಿ.**
> **ಅಧ್ಯಕ್ಷರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ.**

## ಅಪರಿಚಿತನಿಂದ ಮಾಜಿ ಸಂಸದ ಅನಂತ ಕುಮಾರ್ ಹೆಗಡೆಗೆ ಜೀವ ಬೆದರಿಕೆ!

■ವಿಜಯಸಾಕ್ಷಿ ಸುದ್ದಿ, ಕಾರವಾರ



ಅಪರಿಚಿತ ವ್ಯಕ್ತಿಯಿಂದ ಮಾಜಿ ಸಂಸದ ಅನಂತ ಕುಮಾರ್ ಹೆಗಡೆಗೆ ಇ ಮೇಲ್ ಮೂಲಕ ಜೀವ ಬೆದರಿಕೆ ಬಂದಿದೆ.

ಈ ಬಗ್ಗೆ ಮಾಜಿ ಸಂಸದ ಆಪ್ತ ಕಾರ್ಯದರ್ಶಿ ಸುರೇಶ್ ಶೆಟ್ಟಿ ಅವರು ಶಿರಸಿ ಮಾರುಕಟ್ಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಜೂನ್ 24 ರಂದು ಇಮೇಲ್ ಮೂಲಕ ಜೀವ ಬೆದರಿಕೆ ಬಂದಿದೆ. ನ್ಯಾಯಾಲಯದ ಅನುಮತಿ ಮೇರೆಗೆ ಶುಕ್ರವಾರ ದೂರು ದಾಖಲು ಮಾಡಲಾಗಿದೆ. ಈ ಹಿಂದೆಯೂ ಸಹ ಅನಂತ ಕುಮಾರ್ ಹೆಗಡೆಗೆ ಜೀವ ಬೆದರಿಕೆ ಬಂದಿತ್ತು. ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಕೈಗೊಂಡಿದ್ದಾರೆ ಎಂದು ಸುರೇಶ್ ಶೆಟ್ಟಿ ಮಾಹಿತಿ ನೀಡಿದ್ದಾರೆ.

## ಪತ್ರಿಕಾ ದಿನಾಚರಣೆ, ರಕ್ತದಾನ ಶಿಬಿರ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ಪತ್ರಕರ್ತರ ಸಂಘದಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಜು. 19ರಂದು ಬೆಳಿಗ್ಗೆ 9.30ಕ್ಕೆ ಪಟ್ಟಣದ ಸರ್ಕಾರಿ ಆಸ್ಪತ್ರೆ ಸಭಾಭವನದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಮತ್ತು ವಿವಿಧ ಸಂಘಟನೆಗಳ ಸಹಯೋಗದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ. ಪತ್ರಿಕಾ ದಿನಾಚರಣೆ ಹಾಗೂ ರಕ್ತದಾನ ಶಿಬಿರವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸುವರು. ಈ ವೇಳೆ ಹಿರಿಯ ವೈದ್ಯರನ್ನು ಸನ್ಮಾನಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಗುಣಮಟ್ಟದ ಶಿಕ್ಷಣ ಅವಶ್ಯಕ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ತುಂಬಾ ಅವಶ್ಯವಿದೆ ಎಂದು ಗದಗ ಡಿಡಿಪಿಐ ಎಸ್.ಐ. ಗೀತಾ ಕುಲಕರ್ಣಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ಕ್ಕೆ ಭೇಟಿ ನೀಡಿ ಮಾತನಾಡಿ, ಇಂದಿನ ಮಕ್ಕಳು ಬುದ್ಧಿವಂತರಿದ್ದು, ಅವರನ್ನು ನಾಡಿನ ಉತ್ತಮ ಪ್ರಜೆಗಳಾಗಿ ನಿರ್ಮಿಸುವುದು ಪ್ರತಿಯೊಬ್ಬ ಶಿಕ್ಷಕರ ಕರ್ತವ್ಯವಾಗಿದೆ. ಆ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಈ ಶಾಲೆ ತಾಲೂಕಿನಲ್ಲಿಯೇ ಮಾದರಿ ಶಾಲೆಯಾಗಿದ್ದು, ಉತ್ತಮ ಕಲಿಕಾ ವಾತಾವರಣ, ಗುಣಮಟ್ಟದ ಶಿಕ್ಷಕ ವೃಂದವಿದೆ. ಪ್ರತಿ ಕೊಠಡಿಯೂ ಪುಸ್ತಕದ ಭಂಡಾರವಾಗಿ ಕಂಗೊಳಿಸುತ್ತಿದ್ದು, ಮಕ್ಕಳುನ ನಿತ್ಯ ಗೋಡೆ ಬರಹಗಳನ್ನು ಓದಿದರೂ ಅವರ ಭವಿಷ್ಯ ನಿರ್ಮಾಣವಾಗುವಂತಿದೆ ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ. ಕೆ.ಎಂ. ಹೆರಕಲ್ಲ, ಮಂಜುನಾಥ ಕಲ್ಯಾಣಮಠ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಎಸ್.ಎಚ್. ಉಪ್ಪಾರ, ಎಚ್. ಆರ್. ಭಜಂತ್ರಿ, ಎಸ್.ಡಿ. ಪಂಡಿತ, ವಿ.ಎಂ. ಕಂಠಿ, ಟಿ. ವೀಣಾ, ಎಸ್.ವಿ. ಹಿರೇಮಠ, ಶಭಾನಾ ಥಾಲಾಯತ, ರೇಣುಕಾ ಪರ್ವತಗೌಡರ, ಕವಿತಾ ಬಿನ್ನಾಳ, ರಾಧಾ ಭಾತಾಖಾನಿ ಇದ್ದರು.

## ದಪ್ಪ ಚರ್ಮದವರನ್ನ ದಾರಿಗೆ ತರೋದು ಕಷ್ಟ: ಇಲಾಖಾ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ ಸಚಿವ ಕೃಷ್ಣ ಬೈರೇಗೌಡ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದಪ್ಪ ಚರ್ಮದವರನ್ನ ದಾರಿಗೆ ತರೋದು ಕಷ್ಟ ಎಂದು ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಬಿಸಿ ಮುಟ್ಟಿಸಿದ್ದಾರೆ.

ಭೂ ಸುರಕ್ಷಾ ಯೋಜನೆಯಲ್ಲಿ ಹಿಂದೆ ಬಿದ್ದಿದ್ದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಸಿಗಳು, ತಹಸೀಲ್ದಾರ್, ಶಿರಸ್ತೇದಾರರ ಸಭೆಯನ್ನು ಶುಕ್ರವಾರ ಸಚಿವರು ನಡೆಸಿದರು. ಸಭೆಯಲ್ಲಿ ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡ ಸಚಿವರು, ಜನರ ಆಶಯದಂತೆ ಕೆಲಸ ಮಾಡಬೇಕು ಎಂದು ಎಚ್ಚರಿಸಿದರು.

ಎಸಿಗಳು, ತಹಸೀಲ್ದಾರರು ಕಡ್ಡಾಯವಾಗಿ ಇನ್ನು ಮುಂದೆ ಜನರಿಗೆ ಸಿಗಬೇಕು. ಜನರ ಆಶಯಗಳ ವಿರುದ್ಧ ಅಧಿಕಾರಿಗಳು ನಡೆದುಕೊಂಡ್ರೆ ಅಂತಹ ಅಧಿಕಾರಿಗಳ ಮೇಲೆ ಕೇಸ್ ದಾಖಲು ಮಾಡೋದಾಗಿ ಎಚ್ಚರಿಕೆ ನೀಡಿದ್ದಾರೆ. ಆನ್‌ಲೈನ್ ಸರ್ಟಿಫಿಕೇಶನ್ ವಿತರಣೆ ವಿಚಾರವನ್ನು ತಹಸೀಲ್ದಾರರು ಉದ್ದೇಶ ಪೂರ್ವಕವಾಗಿ ಬ್ಲಾಕ್ ಮಾಡಿದ್ದಾರೆ. ರಾಜ್ಯದಾದ್ಯಂತ 21 ಲಕ್ಷ ಪುಟ ವಿತರಣೆ ಆಗಿದ್ದರೆ, ಬೆಂಗಳೂರು ನಗರ-ಗ್ರಾಮಾಂತರದಲ್ಲಿ ಕೇವಲ 27 ಪುಟ ವಿತರಣೆ ಆಗಿದೆ ಎಂದು ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ನೇರ ಆರೋಪ ಮಾಡಿದ್ದಾರೆ.

ಬೆಂಗಳೂರು ನಗರ-ಗ್ರಾಮೀಣ ಜಿಲ್ಲೆಯ ತಹಸೀಲ್ದಾರರು ಕಚೇರಿಗೆ ಹೋಗಲ್ಲ. ನಿಮಗೆ ಬೇರೆಲ್ಲಿ ಕಚೇರಿ ಇದೆ ಎಂಬುದೇ ನಮಗೆ ಗೊತ್ತಿಲ್ಲ. ಇಲ್ಲಿವರೆಗೆ ನಾನೂ ಸಹಿಸಿಕೊಂಡಿದ್ದೇನೆ. ಇನ್ನೂ ಸಹಿಸಿಕೊಳ್ಳಲು ಸಾಧ್ಯವಿಲ್ಲ. ಅಧಿಕಾರಿಗಳು ದಾರಿಗೆ ಬರದಿದ್ದರೆ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಖಡಕ್ ವಾರ್ನಿಂಗ್ ನೀಡಿದ್ದಾರೆ

## ಇಸ್ಪೀಟ್ ಅಡ್ಡೆ ಮೇಲೆ ದಾಳಿ: ಪೊಲೀಸರಿಂದ 28 ಮಂದಿ ಬಂಧನ!

■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಜೂಜಾಟದಲ್ಲಿ ತೊಡಗಿದ್ದ ಪ್ರತಿಷ್ಠಿತ ವ್ಯಕ್ತಿಗಳು ಸೇರಿ 28 ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿರುವ ಘಟನೆ ಚಿತ್ರದುರ್ಗದಲ್ಲಿ ಜರುಗಿದೆ. ನಗರದ ಪ್ರತಿಷ್ಠಿತ ಹೊಟೇಲ್ ದುರ್ಗದ ಸಿರಿ ಹೊಟೇಲ್‌ನಲ್ಲಿ ಜೂಜಾಟ ನಡೆಯುತ್ತಿದ್ದ ಬಗ್ಗೆ ಖಚಿತ ಮಾಹಿತಿ ಪಡೆದ ಪೊಲೀಸರು, ಹೊಳಲ್ಕೆರೆ ಚಿತ್ರಹಳ್ಳಿ ಪೊಲೀಸ್ ಇನ್ಸಪೆಕ್ಟರ್ ನೇತೃತ್ವದಲ್ಲಿ ದಾಳಿ ನಡೆಸಿ ಆರೋಪಿಗಳನ್ನು ಅರೆಸ್ಟ್ ಮಾಡಿದ್ದಾರೆ.

### ಅದೆಷ್ಟೋ ಮನೋ ಲಹರಿಗಳು ಚಿತ್ತ ವಿಚಲತೆಗೆ ಕಾರಣವಾಗಬಹುದು

# ಭಾವನೆಗಳ ಮಾಯಾ ಬಜಾರಿನಲ್ಲಿ



ಬದುಕೆಂಬ ಸುಂದರ ಹೂದೋಟದಲ್ಲಿ ನಿತ್ಯವೂ ಘಮಘಮಿಸುವ ಪರಿಮಳದ ಪುಷ್ಪದಂತೆ ನಮ್ಮಲ್ಲಿನ ಭಾವನೆಗಳು ನಿತ್ಯ ನೂತನವಾದವುಗಳು. ಒಮ್ಮೆ ತಂಗಾಳಿಯನ್ನು ಸೂಸುವ ತಂಪಿನಂತೆ ಮನಸ್ಸಿಗೆ ಮುದ ನೀಡುವ ಹಿತವಾದ ಭಾವನೆಗಳು ನಮ್ಮ ಅಂತರಾಳದ ಮಾಯಾಬಜಾರಿಗೆ ಲಗ್ಗೆ ಇಡುತ್ತವೆ. ಕೆಲವು ಅಪರೂಪದ ಭಾವನೆಗಳು ನಮ್ಮಲ್ಲಿನ ಅಂತ ಶಕ್ತಿಯನ್ನು ಬಡಿದೆಬ್ಬಿಸುತ್ತವೆ. ಹಾಗೆಯೇ ಮನಸ್ಸಿನಲ್ಲಿ ಭಾರವಾದ ದುಗುಡವನ್ನು ಉಂಟುಮಾಡುವ ಅದೆಷ್ಟೋ ಮನೋ ಲಹರಿಗಳು ಚಿತ್ತ ವಿಚಲತೆಗೆ ಕಾರಣವಾಗಬಹುದು.

ನಮ್ಮ ಜೀವನ ಪಯಣದ ಒಂದೊಂದು ವಯೋಮಾನದಲ್ಲಿಯ ಭಾವನೆಗಳು ಭಿನ್ನ. ಬಾಲ್ಯದಲ್ಲಿ ಭಾವನೆಗಳನ್ನೆ ಅರಿಯದ ಮನಸ್ಸು ತಾರುಣ್ಯದಲ್ಲಿ ಭಾವನೆಗಳ ಬಂಧನಕ್ಕೆ ಸಿಲುಕಿ ಒದ್ದಾಡುತ್ತದೆ. ವಯಸ್ಕ ಹಂತದಲ್ಲಿ ಕೆಲವೊಮ್ಮೆ ಭಾವನೆಗಳ ಹುಚ್ಚಾಟ ಜೊತೆಗೆ ಜೀವನದ ಜವಾಬ್ದಾರಿಗಳು ಸ್ಥಿತಪ್ರಜ್ಞೆಯನ್ನು ಮೂಡಿಸುತ್ತವೆ. ವೃದ್ಧಾಪ್ಯದಲ್ಲಿಯ ಭಾವನೆಗಳು ಅನುಭವದ ಮೂಟೆ ಹೊತ್ತು ನಿಂತ ಆಧಾರ ಸ್ತಂಭಗಳಂತೆ.

ನಮ್ಮ ನಿತ್ಯದ ಕಾರ್ಯ ಚಟುವಟಿಕೆಗಳಲ್ಲಿ ಪಂಚೇಂದ್ರಿಯಗಳಿಂದ ಹಲವಾರು ರೀತಿಯ ಸಂವೇದನೆಗಳನ್ನು ಗ್ರಹಿಸುತ್ತೇವೆ. ಅವುಗಳನ್ನು ಸರಿಯಾದ ರೀತಿಯಲ್ಲಿ ಅರ್ಥಗ್ರಹಿಕೆಯನ್ನು ಮಾಡಿಕೊಂಡಾಗ ನಮಗೆ ಆ ಸನ್ನಿವೇಶದ, ಸಂಗತಿಗಳ, ವ್ಯಕ್ತಿಗಳ, ವಸ್ತುಗಳ ನೈಜ ಅನುಭವಗಳು ಉಂಟಾಗುತ್ತವೆ. ಅಂತಹ ದೈನಂದಿನ ಬದುಕಿನ ಅನುಭವಗಳನ್ನು ಸಾರ್ವತ್ರೀಕರಣಗೊಳಿಸಿದಾಗ ನಮ್ಮಲ್ಲೊಂದು ಬಿಂಬಕಲ್ಪನೆ ಅಥವಾ ಭಾವ ಕಲ್ಪನೆ ಮೂಡುತ್ತದೆ. ಅದನ್ನೇ ನಾವು ಪರಿಕಲ್ಪನಾ ರಚನೆಯೆಂದು ಮನೋವೈಜ್ಞಾನಿಕ ಹಿನ್ನೆಲೆಯಲ್ಲಿ ಕರೆಯುತ್ತೇವೆ. ಇಂತಹ ಹಲವು ಪರಿಕಲ್ಪನೆಗಳ ಒಟ್ಟು ಸಾರವೇ ಭಾವನೆಗಳೆಂಬ ಮಾಯಾಬಜಾರು. ಭಾವನೆಗಳನ್ನು ಮಾಯಾ ಬಜಾರು ಎಂದು ಕರೆಯಲು ಕಾರಣ, ಚಂಚಲಶೀಲವಾದ ನಮ್ಮ ಮನಸ್ಸು ಹತ್ತು ಹಲವು ಸಂಗತಿಗಳನ್ನು ಗ್ರಹಿಸುವಲ್ಲಿ ಕೆಲವೊಮ್ಮೆ ವಿಫಲವೂ ಸಹ ಆಗಬಹುದು. ಅಂತಹ ಸಂದರ್ಭದಲ್ಲಿನ ತಪ್ಪು ಗ್ರಹಿಕೆಗಳು ನಮ್ಮ ಚಿಂತನೆಗೆ ತಡೆಗೋಡೆಗಳಾಗುತ್ತವೆ.

ಪ್ರಜ್ಞಾಪೂರ್ವಕವಾಗಿ ಆಲೋಚಿಸಿದಾಗ ತಾರ್ಕಿಕ ಹಿನ್ನೆಲೆಯಲ್ಲಿ ವಾಸ್ತವ ಚಿತ್ರಣವನ್ನು ಅರಿಯಬಹುದು. ಇಲ್ಲವಾದರೆ ಭಾವನೆಗಳು ಕಂಡ ಕಂಡವರಿಗೆ ಅಂದುಕೊಂಡ ರೀತಿಯಲ್ಲಿ ಬಜಾರಿನಲ್ಲಿ ಮಾರುವ ಕಡಿಮೆ ಬೆಲೆಯ ವಸ್ತುಗಳಾಗಬಹುದು. ಅದೇನೇ ಇರಲಿ, ವಿವೇಚನೆ ಎಂಬ ಅಸ್ತ್ರದ ಮೂಲಕ ನಮ್ಮ ನಮ್ಮ ಮನೋಧ್ಯಾನವನ್ನು ಅರಿಯುವ ಆತ್ಮಬಲ ನಮ್ಮದಾಗಬೇಕು. ಇಂದು ನಮ್ಮ ಸುತ್ತಲಿನ ಸನ್ನಿವೇಶವನ್ನು ಗ್ರಹಿಸಿದಾಗ ಹಲವು ಅಹಿತಕರ ಘಟನೆಗಳು ಸಂಭವಿಸುತ್ತಿರುವುದನ್ನು ಕಾಣುತ್ತೇವೆ. ಅದೆಲ್ಲದಕ್ಕೂ ಕಾರಣ ಮನುಷ್ಯನ ಮನಸ್ಥಿತಿ.

ಭಾವನೆಗಳು ಕೆಲವೊಮ್ಮೆ ಮಾಯೆಯಂತೆ ಮನಸ್ಸೂರೆಗೊಂಡು ಜೀವನದ ದಿಕ್ಕು ದಾರಿಯನ್ನು ತಪ್ಪಿಸಬಹುದು ಎಚ್ಚರಿಕೆ ನಮ್ಮ ಚಿಂತನೆಗೆ ಬಿಟ್ಟದ್ದು. ಅದರಲ್ಲೂ ವಿಶೇಷವಾಗಿ ಹದಿಹರೆಯದ ವಯಸ್ಸಿನ ಮನೋತುಮುಲಗಳಿಗೆ ಬಲಿಯಾಗಿ ಅಮೂಲ್ಯವಾದ ಜೀವನವನ್ನೇ ನರಕ ಸದೃಶ ಮಾಡಿಕೊಳ್ಳುವ ಇಂದಿನ ಅದೆಷ್ಟೋ ಸಂಗತಿಗಳು ಮನಕಲಕುವಂತಿವೆ. ಜ್ಞಾನೇಂದ್ರಿಯಗಳ ಸಹಾಯದಿಂದ ಪಡೆಯುವ ಸಂವೇದನೆಗಳನ್ನು ಅದ್ಭುತವಾಗಿ ಅರ್ಥ ಗ್ರಹಿಕೆ ಮಾಡಿಕೊಳ್ಳುವ ಕೌಶಲ ಅರಿಯಬೇಕು. ಅಂದಾಗ ನಮ್ಮ ಚಿಂತನೆಗೆ ಒಂದು ಭದ್ರಬುನಾದಿ ಸಿಗುತ್ತದೆ.

ಪರಮಪೂಜ್ಯ ಸಿದ್ದೇಶ್ವರ ಶ್ರೀಗಳು ಹೇಳಿದ ಒಂದು ದೃಷ್ಟಾಂತ ನೆನಪಿಗೆ ಬರುತ್ತದೆ. ಒಂದೂರಲ್ಲಿ ಒಬ್ಬ ಸಿರಿವಂತನಿದ್ದ. ಒಂದು ದಿನ ಆತನಿಗೆ ತನ್ನ ಸಂಪತ್ತಿನ ಬಲದಿಂದ ದೇವರನ್ನು ಹೇಗಾದರೂ ಮಾಡಿ ಬಂಧಿಸಬೇಕು ಎನ್ನುವ ಭಾವನೆ ಒಡಮೂಡಿತು. ಹೀಗೆ ಒಬ್ಬ ಅವರ ಸ್ನೇಹಿತ ಸಲಹೆ ನೀಡುತ್ತಾರೆ. ನಿನ್ನ ಸಂಪತ್ತನ್ನು ಬಳಸಿ ಭವ್ಯವಾದ ಮಂದಿರವನ್ನು ಕಟ್ಟಿಬಿಡು, ಆಗ ಖಂಡಿತವಾಗಿಯೂ ದೇವರು ತಾನಾಗಿಯೇ ಆ ದೇವಾಲಯವನ್ನು ಪ್ರವೇಶಿಸುತ್ತಾನೆ ಎಂದು. ಆಗ ಆ ಸಿರಿವಂತನ ಮನಸ್ಸಿನಲ್ಲಿ ಅಗಾಧವಾದ ಭಾವನೆ ಚಿಗುರೊಡೆಯಿತು. ದೇಶ ವಿದೇಶಗಳಿಂದ ಪ್ರಸಿದ್ಧ ಶಿಲ್ಪಿಗಳನ್ನು ಕರೆಯಿಸಿ ಹತ್ತಾರು ವರ್ಷಗಳ ಕಾಲ ಅವರೆಲ್ಲರ ಶ್ರಮದಿಂದ ಸುಪ್ರಸಿದ್ಧ ಸುಂದರ ಮಂದಿರ ಕಟ್ಟಿಸಿದ. ಒಂದು ದಿನ ಶುಭ ಮುಹೂರ್ತದಲ್ಲಿ ದೇವರ ಮೂರ್ತಿಯ ಪ್ರತಿಷ್ಠಾಪನೆಯೂ ಅತ್ಯಂತ ವಿಜ್ರಂಭಣೆಯಿಂದ ನಡೆಯಿತು.

ಆಗ ಸಿರಿವಂತನ ಭಾವನೆ 'ದೇವರು ನನ್ನ ಮಂದಿರದಲ್ಲಿ ಬಂಧಿತನಾದ. ನಾನೇ ಬಹುದೊಡ್ಡ ಸಿರಿವಂತ' ಎಂದುಕೊಂಡ. ಅದೇ ಸಂತೋಷದಲ್ಲಿ ಮನೆಗೆ ಹೋಗಿ ಮಲಗಿದ. ಹತ್ತಿರದಲ್ಲಿಯೇ ಆತನ ಮೊಮ್ಮಗ ಮಲಗಿದ್ದ ನಮ್ಮಜ್ಜ ದೇವರನ್ನು ಮಂದಿರದಲ್ಲಿ ಕೂಡಿಹಾಕಿದ್ದಾನೆ. ಆತನನ್ನು ನಾನು ಮುಕ್ತಗೊಳಿಸಲೇಬೇಕು ಎಂದು ಬಾಲಕ ಚಿಂತಿಸಿದ. ಮಧ್ಯರಾತ್ರಿ ಎದ್ದು ಬಾಲಕನು ಅಜ್ಜನ ಪಕ್ಕದಲ್ಲಿದ್ದ ಕಿಲಿಕೈ ತೆಗೆದು-ಕೊಂಡು ಮಂದಿರಕ್ಕೆ ಬಂದ. ಆಗ ಬಹುದೊಡ್ಡ ದೇವಾಲಯವಾದ್ದರಿಂದ ದೊಡ್ಡದಾದ ಬೀಗವನ್ನು ಹಾಕಲಾಗಿತ್ತು. ಆ ಪುಟ್ಟ ಬಾಲಕನಿಗೆ ಅದು ಎಟುಕಲಿಲ್ಲ. ಆದರೂ ಆತ ಆ ಬಾಗಿಲನ್ನು ತೆಗೆಯಲು ಪ್ರಯತ್ನಿಸುತ್ತಿದ್ದ. ಅಷ್ಟರಲ್ಲಿ ಹಿಂದಿನಿಂದ ಯಾರೋ ಬಾಲಕನ ಬೆನ್ನು ತಟ್ಟಿದ ಹಾಗೆ ಕೇಳಿಸಿತು. ಮಗು ನೀನು ಇಲ್ಲಿ ಏನು ಮಾಡುತ್ತಿರುವೆ ಈ ಮಧ್ಯರಾತ್ರಿಯಲ್ಲಿ ಎಂದು ಕೇಳಿದರು. ಆಗ ಬಾಲಕ ನಮ್ಮ ಅಜ್ಜ, ಇಲ್ಲಿ ದೇವರನ್ನು ಬಂಧಿಸಿಬಿಟ್ಟಿದ್ದಾನೆ. ಆ ದೇವರನ್ನು ನಾನು ಮುಕ್ತಗೊಳಿಸುತ್ತಿರುವೆ ಎಂದಾಗ, ನಿಮ್ಮ ಅಜ್ಜನಿಗೆ ಎಲ್ಲೋ ಭ್ರಮೆಯಾಗಿದೆ. ದೇವರನ್ನು ಬಂಧಿಸುವ ಶಕ್ತಿ ಈ ಜಗತ್ತಿನಲ್ಲಿ ಯಾರಿಗೂ ಇಲ್ಲ.

ಈ ಮಾತನ್ನು ಕೇಳುತ್ತಲೇ ಬಾಲಕನಿಗೆ ಅಪಾರ ಹರ್ಷವಾಯಿತು. ಆ ಬಾಲಕನಿಗೆ ಆಗ ಅರಿವಾಗಿತ್ತು. ಭಗವಂತ ಈ ವಿಶಾಲ ವಿಶ್ವದಲ್ಲಿ ಸೂರ್ಯ-ಚಂದ್ರರಲ್ಲಿ ನಗುತ್ತಿರುವ. ನಕ್ಷತ್ರವಾಗಿ ಮಿನುಗುತ್ತಿರುವ, ಹೊಳೆಹಳ್ಳವಾಗಿ ಹರಿಯುತ್ತಿರುವ. ಎಲ್ಲಾ ಕಾಲಗಳಲ್ಲಿಯೂ ನಲಿಯುವ ದೇವನಿಗೆ ಯಾವ ಬಂಧನವೂ ಇಲ್ಲ... ಈ ದೃಷ್ಟಾಂತದ ಸಾರ ನಮ್ಮ ಕೆಲವೊಂದು ಅರ್ಥ ರಹಿತ ಭಾವನೆಗಳು ಕೆಲವೊಮ್ಮೆ ನಮಗೆ ಬಂಧನವೂ ಆಗಬಹುದು. ಹಾಗಾಗಿ, ಭಾವನೆಗಳೆಂಬ ಮಾಯ ಬಜಾರಿನಲ್ಲಿ ಹುಷಾರಾಗಿರಬೇಕಷ್ಟೇ...



– ಸುಧಾ ಹುಚ್ಚಣ್ಣವರ.
ಉಪನ್ಯಾಸಕರು, ಲೇಖಕರು.
ಗದಗ.

### ವಾಣಿಜ್ಯೋದ್ಯಮಿಗಳ ಸಮ್ಮೇಳನ, ಕೈಗಾರಿಕಾ ವಸ್ತು ಪ್ರದರ್ಶನ ಆಗಸ್ಟ್ 15ರಿಂದ

# 'ಗದಗ ಉತ್ಸವ-2025'ರ ಮಾಹಿತಿ ಪತ್ರ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ 'ಗದಗ ಉತ್ಸವ-2025'ನ್ನು ಆಗಸ್ಟ್ 15ರಿಂದ 19ರವರೆಗೆ ಶ್ರೀ ಸ್ವಾಮಿ ವಿವೇಕಾನಂದ ಸಭಾ ಭವನದಲ್ಲಿ ವಸ್ತು ಪ್ರದರ್ಶನ ಹಾಗೂ ಕಾರ್ಯಕ್ರಮವನ್ನು ಕೆ.ಎಚ್. ಪಾಟೀಲ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ವಸ್ತು ಪ್ರದರ್ಶನ ಮಳಿಗೆಗಳ ಮಾಹಿತಿ ಪತ್ರವನ್ನು ಉತ್ಸವ ಸಮಿತಿ ಚೇರಮನ್ ಆನಂದ ಎಲ್.ಪೊತ್ನೀಸ, ಕೋ-ಚೇರಮನ್ ಸದಾಶಿವಯ್ಯ ಎಸ್. ಮದರಿಮಠ, ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ, ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಬಿಡುಗಡೆ ಮಾಡಿದರು.

> ಕೈಗಾರಿಕಾ ವಸ್ತುಪ್ರದರ್ಶನದಲ್ಲಿ ಗುಡಿ ಕೈಗಾರಿಕೆಗಳು, ಸಣ್ಣ ಉದ್ದಿಮೆದಾರರು ತಯಾರಿಸಿದ ಸಿದ್ಧ ಉಡುಪುಗಳು, ನವೀನ ಮಾದರಿಯ ಇಲೆಕ್ಟ್ರಾನಿಕ್ಸ್‌ಗಳು, ಸಾವಯವ ಕೃಷಿ ಬೀಜಗಳ ಮಾಹಿತಿ, ಹೊಸ ಟ್ರಾಕ್ಟರ್‌ಗಳು, ಕೃಷಿ ಉಪಕರಣಗಳು, ಸೋಲಾರ್ ಎನರ್ಜಿ ಪರಿಕರ, ಅತ್ಯಾಕರ್ಷಕ ಪೀಠೋಪಕರಣ, ಅಲಂಕಾರಿಕ ವಸ್ತುಗಳು, ಬಟ್ಟೆಗಳು ಹೀಗೆ ವೈವಿಧ್ಯಪೂರ್ಣ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ನಡೆಯುವುದು.

ಪ್ರತಿ ವರ್ಷದಂತೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಬೆಂಗಳೂರು, ಗದಗ ಜಿಲ್ಲಾ ಕೈಗಾರಿಕಾ ಕೇಂದ್ರ, ಜಿಲ್ಲಾ ಪಂಚಾಯಿತಿ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ 'ಗದಗ ಉತ್ಸವ-2025'ನ್ನು ಆಯೋಜಿಸಲಾಗಿದೆ.

ಸ್ಥಳೀಯ ಕಲಾವಿದರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಮತ್ತು ಕಲಾ ಪರಂಪರೆಯನ್ನು ಬಿಂಬಿಸುವ ಸಲುವಾಗಿ ಪ್ರತಿದಿನ ಸಾಯಂಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಈ ವಸ್ತು ಪ್ರದರ್ಶನದಲ್ಲಿ ಭಾಗವಹಿಸಲು ಹಾಗೂ ಮಳಿಗೆಯನ್ನು ಕಾಯ್ದಿರಿಸಲು ಮತ್ತು ಆಸಕ್ತ ಕಲಾವಿದರು ಹೆಸರನ್ನು ನೋಂದಾಯಿಸಲು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಕಚೇರಿ ಸಂಪರ್ಕಿಸಬೇಕೆಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ, ಉತ್ಸವ ಸಮಿತಿ ಚೇರಮನ್ ಆನಂದ ಎಲ್.ಪೊತ್ನೀಸ ,ಕೋ-ಚೇರಮನ್ ಸದಾಶಿವಯ್ಯ ಎಸ್.ಮದರಿಮಠ ಮನವಿ ಮಾಡಿದ್ದಾರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋವನಾಳ ಗ್ರಾ.ಪಂ ನೂತನ ಅಧ್ಯಕ್ಷರಾಗಿ ಕರಿಯಪ್ಪಗೌಡ ಅವಿರೋಧ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಗೋನಾಳ ಗ್ರಾ.ಪಂ ಅಧ್ಯಕ್ಷರಾಗಿ ಕರಿಯಪ್ಪಗೌಡ ಹೊಸಗೌಡರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಗಳೂ ಆದ ತಾ.ಪಂ ಇಓ ಕೃಷ್ಣಪ್ಪ ಧರ್ಮರ ಹೇಳಿದರು.

ಇತ್ತೀಚೆಗೆ ಅಧ್ಯಕ್ಷ ಅಣ್ಣಪ್ಪ ರಾಮಗೇರಿಯವರ ರಾಜಿನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಗುರುವಾರ ಚುನಾವಣೆ ಘೋಷಣೆಯಾಗಿತ್ತು. ಗೋವನಾಳ ಗ್ರಾ.ಪಂ 8 ಜನ ಸದಸ್ಯ ಬಲ ಹೊಂದಿದ್ದು, ಗುರುವಾರ ಎರಡನೆಯ ಅವಧಿಗೆ ನಡೆದ ಅಧ್ಯಕ್ಷರ ಚುನಾವಣೆಯಲ್ಲಿ ಕರಿಯಪ್ಪಗೌಡ ಹೊಸಗೌಡರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆ ಜರುಗಿತು. ಎಂಟು ಜನ ಸದಸ್ಯರಲ್ಲಿ ಎರಡು ಜನ ಸದಸ್ಯರು ಚುನಾವಣೆಯಲ್ಲಿ ಭಾಗವಹಿಸಿರಲಿಲ್ಲ. 6 ಜನರು ಹಾಜರಿದ್ದ ಹಿನ್ನೆಲೆಯಲ್ಲಿ ಚುನಾವಣೆ ನಡೆಸಿ ಫಲಿತಾಂಶ ಘೋಷಿಸಲಾಗಿದೆ ಎಂದು ತಾ.ಪಂ ಇಓ ಕೃಷ್ಣಪ್ಪ ಧರ್ಮರ ಹೇಳಿದರು.

ನೂತನ ಅಧ್ಯಕ್ಷ ಕರಿಯಪ್ಪಗೌಡ ಹೊಸಗೌಡ್ರ ಎಲ್ಲ ಸದಸ್ಯರು ನೀಡಿದ ಅವಕಾಶಕ್ಕೆ ಧನ್ಯವಾದಗಳನ್ನು ಅರ್ಪಿಸಿ, ಪಂಚಾಯಿತಿಯ ಎಲ್ಲ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಂಚಾಯಿತಿ ವ್ಯಾಪ್ತಿಯಲ್ಲಿ ಆಗಬೇಕಾಗಿರುವ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ನಿಕಟಪೂರ್ವ ಅಧ್ಯಕ್ಷ ಅಣ್ಣಪ್ಪ ರಾಮಗೇರಿ, ಉಪಾಧ್ಯಕ್ಷೆ ನಿರ್ಮಲಾ ತಳವಾರ, ಸದಸ್ಯರಾದ ಮಂಜನಗೌಡ ಕೆಂಚನಗೌಡ್ರ, ಸುಶೀಲವ್ವ ಮರಲಿಂಗನಗೌಡ್ರ, ಸುಧಾ ಮಾದರ, ಪ್ರಮುಖರಾದ ಭರಮಣ್ಣ ರೊಟ್ಟಿಗವಾಡ, ನಿಂಗನಗೌಡ್ರು ಹೊಸಗೌಡರ, ನೀಲಪ್ಪಗೌಡ ದುರಗನಗೌಡರ, ಗಂಗಾಧರ ಮಾದರ, ಚಂದ್ರಶೇಖರ ತಳವಾರ, ನಾಗರಾಜ ದೊಡ್ಡಮನಿ, ನೀಲಪ್ಪ ತಿಮ್ಮಾಪೂರ, ಬಸನಗೌಡ ಹೊಸಗೌಡ್ರ, ಹನುಮಂತಗೌಡ ರಾಯನಗೌಡರ, ನಿಂಗಪ್ಪ ಶಿವಬಸಣ್ಣವರ, ಪಿಡಿಓ ಜಗದೀಶ ಕುರುಬರು, ಶಿವರಾಜ್ ಸೊರಟೂರ, ಹನುಮಂತ ಮರಲಿಂಗನಗೌಡ್ರ, ಮೌನೇಶ ಪಶುಪತಿಹಾಳ ಇದ್ದರು.

## ವಿಮೆನ್ ಇಂಡಿಯಾ ಮೂವ್ಮೆಂಟ್ ಗದಗ ಜಿಲ್ಲಾ ಸಮಿತಿ ಅಸ್ತಿತ್ವಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿಮೆನ್ ಇಂಡಿಯಾ ಮೂವ್ಮೆಂಟ್ ಗದಗ ಜಿಲ್ಲಾ ಸಮಿತಿಯು ಅಸ್ತಿತ್ವಕ್ಕೆ ಬಂದಿದ್ದು, ಜಿಲ್ಲಾಧ್ಯಕ್ಷೆಯಾಗಿ ಸುಮಯ್ಯ ಬಳ್ಳಾರಿ, ಜಿಲ್ಲಾ ಉಪಾಧ್ಯಕ್ಷೆಯಾಗಿ ಯಾಸ್ಮೀನ್ ಕಟ್ಟಿಮನಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಕಾಜಲ್‌ಬಾಗೇವಾಡಿ, ಜಿಲ್ಲಾ ಕಾರ್ಯದರ್ಶಿಯಾಗಿ ಅಫ್ರೀನ್, ಜಿಲ್ಲಾ ಕೋಶಾಧಿಕಾರಿಯಾಗಿ ಆತಿಕಾ ಹೊಸಮನಿ ಹಾಗೂ ಜಿಲ್ಲಾ ಸಮಿತಿ ಸದಸ್ಯರುಗಳಾಗಿ ಶಾಹಿಸ್ತ, ಸಹನಾ, ಆಮೀನ, ಫಿರ್ದೋಸ್, ಮುನಿರಾ ಬೇಗಮ್ ಹಾಗೂ ಆಸ್ಮ ಮುಲ್ಲಾ ರವರು ಆಯ್ಕೆಯಾದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ನಸ್ರಿಯಾ ಬೆಳ್ಳಾರೆ, ಮಹಿಳಾ ಪ್ರಾತಿನಿಧ್ಯವು ಸಾಮಾಜಿಕ ನ್ಯಾಯದ ಕೀಲಿಕೈ. ಆದ್ದರಿಂದ ಮಹಿಳೆಯರು ರಾಜಕೀಯವಾಗಿ ಸಶಕ್ತರಾಗಬೇಕಿದೆ. ಈ ನಿಟ್ಟಿನಲ್ಲಿ ರಾಷ್ಟ್ರಾದ್ಯಂತ ಮಹಿಳೆಯರನ್ನು ಸಂಘಟಿಸುತ್ತಿರುವ ವಿಮೆನ್ ಇಂಡಿಯಾ ಮೂವ್ಮೆಂಟ್‌ನ ಸದಸ್ಯರಾಗಬೇಕೆಂದು ಕರೆ ನೀಡಿದರು.

ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಬಿಲಾಲ್ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ ಮಾತನಾಡಿದರು. ಸುಮಯ್ಯ ಸ್ವಾಗತಿಸಿದರು. ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಇಸ್ಮಾಯಿಲ್ ಶಿರಹಟ್ಟಿ ಕಾರ್ಯಕ್ರಮ ನಿರೂಪಿಸಿದರು. ಕಾಜಲ್ ಬಾಗೇವಾಡಿ ವಂದಿಸಿದರು.

### ಸ್ವಾವಲಂಬಿ ಸಖಿ ಒಕ್ಕೂಟದ ಉತ್ಪನ್ನಗಳಿಗೆ ಡಾ. ಶಾಲಿನಿ ರಜನಿಶ್ ಮೆಚ್ಚುಗೆ

# ಸ್ವಾವಲಂಬಿ ಮಹಿಳೆಯರ ಕಾರ್ಯ ಸ್ಪೂರ್ತಿಯಾಗಲಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೆಂಗಳೂರಿನ ನಬಾರ್ಡ್ ಕ್ಷೇತ್ರೀಯ ಕಾರ್ಯಾಲಯದಲ್ಲಿ ನಬಾರ್ಡ್ 44 ಸಂಸ್ಥೆ ದಿನಾಚರಣೆ ಅಂಗವಾಗಿ ಸ್ವಾವಲಂಬಿ ಒಕ್ಕೂಟಗಳು ಆಯೋಜಿಸಿದ್ದ ಕೈ ಕುಸುರಿ ಹಾಗೂ ಕೈಮಗ್ಗ ವಸ್ತುಗಳ ಪ್ರದರ್ಶನದಲ್ಲಿ ಭಾಗವಹಿಸಿದ್ದ ಧಾರವಾಡದ ಸ್ವಾವಲಂಬಿ ಸಖಿ ಒಕ್ಕೂಟ ತಯಾರಿಸಿದ ಅದ್ಭುತವಾದ ಆರಿ ಕಸೂತಿ ಉತ್ಪನ್ನಗಳಿಗೆ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಆರಿ ಕಲೆಯು, ಕಾಶ್ಮೀರದಲ್ಲಿ ಹುಟ್ಟಿಕೊಂಡಿದ್ದರೂ ನಮ್ಮ ಧಾರವಾಡದ ಮಹಿಳೆಯರು ಅದನ್ನು ವಿವಿಧ ಉತ್ಪನ್ನಗಳಿಗೆ ಅಳವಡಿಸಿಕೊಂಡು ಬಹಳಷ್ಟು ಕಲಾತ್ಮಕ ವಸ್ತುಗಳನ್ನು ತಯಾರಿಸಿದ್ದಾರೆ. ಇದುವರೆಗೆ 1.85 ಕೋಟಿಯ ವ್ಯವಹಾರ ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಮೆಚ್ಚುಗೆ ಸೂಚಿಸಿದರು.

> ಈ ಚಟುವಟಿಕೆಗಳಿಗೆ ನಬಾರ್ಡ್ ಬ್ಯಾಂಕ್ ಆರ್ಥಿಕವಾಗಿ ಹಾಗೂ ತರಬೇತಿಗಳಿಗೆ ಸಹಾಯವನ್ನು ನೀಡುವ ಮೂಲಕ ಮಹಿಳೆಯರಿಗೆ ಆಧಾರವಾಗಿ ನಿಂತಿದೆ. ಸ್ವಾವಲಂಬಿ ಮಹಿಳೆಯರ ಈ ಕಥೆಯು ಎಲ್ಲ ಮಹಿಳೆಯರಿಗೂ ಸ್ಪೂರ್ತಿಯಾಗಲಿ ಎಂದು ಡಾ. ಶಾಲಿನಿ ರಜನೀಶ್ ಶುಭ ಹಾರೈಸಿದರು.

ಅವರು ಖಣದ ಬಟ್ಟೆ ಮತ್ತು ಆರಿ ಕಲೆಯನ್ನು ನವೀಕರಿಸಿ ಅದರಿಂದ ಆಭರಣಗಳು, ಬ್ಯಾಗುಗಳು, ಮಕ್ಕಳ ಉಡುಪುಗಳು, ಲೆಹೆಂಗಾ ಬ್ಲೌಸ್ ಇತ್ಯಾದಿ ಉಡುಪುಗಳನ್ನು ತಯಾರಿಸಿದ್ದಾರೆ. ಹುಬ್ಬಳ್ಳಿಯ ಶಿರೂರ ಪಾರ್ಕ್ ಹತ್ತಿರ ಇವರು ಒಂದು ಮಳಿಗೆಯನ್ನು ತೆ-ರೆದು, ಸದರಿ ಉತ್ಪನ್ನಗಳ ಮಾರಾಟವನ್ನು ಉತ್ತಮವಾಗಿ ಕೈಗೊಂಡಿದ್ದಾರೆ.

2021ರಲ್ಲಿ ಧಾರವಾಡ ಜಿಲ್ಲೆಯಲ್ಲಿ ನಬಾರ್ಡ್ ಸಹಭಾಗಿತ್ವದಲ್ಲಿ 350 ಸದಸ್ಯರನ್ನು ಒಳಗೊಂಡು ಈ ಕಂಪನಿ ಪ್ರಾರಂಭಿಸಿದರು. 9 ಜನ ಮಹಿಳಾ ನಿರ್ದೇಶಕರು ಈ ಕಂಪನಿಯನ್ನು ಬಲಿಷ್ಠವಾಗಿ ನಡೆಸಿಕೊಂಡು ಬರುತ್ತಿದ್ದಾರೆ. ಇದರಲ್ಲಿ ಆರು ಘಟಕಗಳಿದ್ದು, ಆರಿಬ್ಯಾಗ್ ಯೂನಿಟ್, ಎಥನಿಕ್ ವೇರ್, ಲಾಂಜ್ ವೇರ, ಫ್ರೇಮ್ ಯುನಿಟ್, ಜ್ಯುವೆಲರಿ ಯೂನಿಟ್, ಕುರ್ತಿ ಯೂನಿಟ್ ನಿರ್ವಹಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ನಬಾರ್ಡ್‌ನ ಚೀಫ್ ಜನರಲ್ ಮ್ಯಾನೇಜರ್ ಡಾ. ಸುರೇಂದ್ರ ಬಾಬು ಗುಪ್ತಾ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ರೀಜನಲ್ ಡೈ-ರೆಕ್ಟರ್ ಡಾ. ಸೋನಾಲಿ ಸೇನ್, ಕೆನರಾ ಬ್ಯಾಂಕ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ಭವೇಂದ್ರ ಕುಮಾರ್, ಧಾರವಾಡ ನಬಾರ್ಡ್‌ನ ಸಹಾಯಕ ಮಹಾ ಪ್ರಬಂಧಕ ಮಯೂರ ಕಾಂಬ್ಳೆ, ಸ್ವಾವಲಂಬಿ ಸಖಿ ಒಕ್ಕೂಟದ ಸರ್ವಮಂಗಳ ಮೊತಿ, ವಿಜಯ ಮುದಿಗೌಡರ ಮತ್ತು ಅಕ್ಷತಾ ಎಫ್ ಇದ್ದರು.

# ದತ್ತಿ ಉಪನ್ಯಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ಜುಲೈ 18ರಂದು ಸಾಯಂಕಾಲ 5 ಗಂಟೆಗೆ ಸಂಸ್ಥೆಯ ಸಭಾ ಭವನದಲ್ಲಿ ದಿ. ಶ್ರೀಮತಿ ಇಂದುಮತಿ ಲಕ್ಷ್ಮಣರಾವ್ ಪೊತ್ನೀಸ ಇವರ ಸ್ಮಾರಕ ದತ್ತಿ ಉಪನ್ಯಾಸ ನಿಮಿತ್ತ ಮೊಣಕಾಲು ಸುರಕ್ಷತೆ ಕುರಿತು ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ.

ದಿ. ಶ್ರೀಮತಿ ಇಂದುಮತಿ ಲಕ್ಷ್ಮಣರಾವ್ ಪೊತ್ನೀಸ ಅವರು 1937ರಲ್ಲಿ ಬಾಗಲಕೋಟಿಯಲ್ಲಿ ಜನಿಸಿ ತಮ್ಮ ಪ್ರಾಥಮಿಕ ಶಿಕ್ಷಣವನ್ನು ಮುಂಬೈ ನಗರದಲ್ಲಿ ಪೂರೈಸಿ ಎಸ್.ಎಸ್.ಎಲ್.ಸಿ.ಯನ್ನು ವಿಜಯಪುರದಲ್ಲಿ ಪೂರೈಸಿದರು. ಗದಗ ನಗರದ ಪ್ರತಿಷ್ಠಿತ ಪೊತ್ನೀಸ ಮನೆತನದವರಾದ ಲಕ್ಷ್ಮಣರಾವ್ ಪೊತ್ನೀಸ ಇವರನ್ನು ಮದುವೆಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟು ಗದಗ ನಗರದಲ್ಲಿ ನೆಲೆಸಿದರು.

ಇಂದುಮತಿ ಲಕ್ಷ್ಮಣರಾವ್ ಪೊತ್ನೀಸರು ಬಂಧು-ಬಾಂಧವರೊಂದಿಗೆ, ತುಂಬು ಕುಟುಂಬದೊಂದಿಗೆ ಬಾಳಿ ಬೆಳಗಿ ನಿಧನರಾದ ನಿಮಿತ್ತ ಇವರ ಸವಿನೆನಪಿಗಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಹಾಲು ಉತ್ಪಾದಕರ ಸಹಕಾರ ಸಂಘಗಳ ಪದಾಧಿಕಾರಿಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮ

# ಹೈನುಗಾರಿಕೆ ರೈತರ ಜೀವನ ಸುಧಾರಿಸಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಾಲನ್ನು ಜಾಗತಿಕ ಆಹಾರವನ್ನಾಗಿ ವಿಶ್ವಕ್ಕೆ ಪರಿಚಯಿಸುವುದು ಮತ್ತು ಹೈನೋದ್ಯಮದ ಕಾರ್ಯಚಟುವಟಿಕೆ ಸಾಧನಗಳನ್ನು ಪ್ರಚುರಪಡಿಸುವುದರರೊಂದಿಗೆ ಪ್ರೋತ್ಸಾಹಿಸುವುದಾಗಿದೆ. ಆಹಾರ ಮತ್ತು ಕೃಷಿ ಸಂಸ್ಥೆಯ ಇಂತಹ ಪ್ರೇರಣಾದಾಯಕ ಉಪಕ್ರಮಗಳಿಂದಾಗಿ ಇಂದು ವಿಶ್ವದಾದ್ಯಂತ 100 ಕೋಟಿಗೂ ಅಧಿಕ ರೈತ ಕುಟುಂಬಗಳು ಹೈನುಗಾರಿಕೆಯಲ್ಲಿ ತೊಡಗಿಕೊಂಡು ಗುಣಮಟ್ಟದ ಹಾಲು ಉತ್ಪಾದನೆಯೊಂದಿಗೆ ಅವರ ಜೀವನ ಸುಧಾರಣೆಗೂ ಸಹಕಾರಿಯಾಗಿದೆ ಎಂದು ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಲಿಂಗರಾಜಗೌಡ ಎಚ್.ಪಾಟೀಲ ಹೇಳಿದರು.

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಧಾರವಾಡ ಹಾಲು ಒಕ್ಕೂಟ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಂಡರಗಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಎಲ್ಲಾ ಹಾಲು ಉತ್ಪಾದಕರ



ಸಹಕಾರ ಸಂಘಗಳ ಅಧ್ಯಕ್ಷರು, ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಶುಕ್ರವಾರ ಹಮ್ಮಿಕೊಂಡಿದ್ದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ಸಹಕಾರಿ ಪ್ರಕಾಶ ಬಿ.ಮಹಾಜನಶೆಟ್ಟರ ಮಾತನಾಡಿ, ಕೃಷಿ ಆಧಾರಿತ ಭಾರತದ ಜನರ ಜೀವನದ ಉಪಕಸಬುಗಳಲ್ಲೊಂದಾದ ಹೈನುಗಾರಿಕೆ ಶ್ರೀಮಂತದಾಯಕ ಕಾಯಕವಾಗಿದೆ. ಭಾರತವಿಂದು ವಿಶ್ವದಲ್ಲಿಯೇ ಅತೀ ಹೆಚ್ಚು ಹಾಲು ಉತ್ಪಾದಿಸುತ್ತಿರುವ ಅಗ್ರಮಾನ್ಯ ರಾಷ್ಟ್ರವಾಗಿದ್ದು, ಸುಮಾರು 230.58 ಮಿಲಿಯನ್ ಮೆಟ್ರಿಕ್ ಟನ್ ಹಾಲು ಉತ್ಪಾದನೆ ಮಾಡಿ ಶೇ.4ರಷ್ಟು ವಾರ್ಷಿಕ ಬೆಳವಣಿಗೆ ಕಂಡಿದೆ. ಕರ್ನಾಟಕ ರಾಜ್ಯದ ಜನರ ಸ್ವಾವಲಂಬಿ ಮತ್ತು ಸಮಗ್ರ ಸಹಕಾರಿ ಹಾಲು ಉತ್ಪಾದನೆ ಅಭಿವೃದ್ಧಿಯನ್ನು ಉತ್ತೇಜಿಸುವ ಮೂಲಕ ಹಾಲು ಉತ್ಪಾದಕ ಸದಸ್ಯರ ಜೀವನದಲ್ಲಿ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಏಳಿಗೆಗೆ ಶ್ರಮಿಸುವ ಕೆ.ಎಂ.ಎಫ್ ಕೋಟ್ಯಾಂತರ ಜನರ ಜೀವನಾಸರೆಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯೂನಿಯನ್‌ನ ಉಪಾಧ್ಯಕ್ಷ ವಾಯ್. ಎಫ್. ಪಾಟೀಲ ವಹಿಸಿ ಮಾತನಾಡಿ, ಸಮಾಜದಲ್ಲಿ ಆರ್ಥಿಕವಾಗಿ ಅಬಲರಾದವರು, ಅವಕಾಶವಂಚಿತ ಜನರಿದ್ದು, ಇಂತಹ ಜನರ ಆರ್ಥಿಕ, ಸಾಮಾಜಿಕ ಸ್ಥಿತಿ-ಗತಿಯನ್ನು ಉತ್ತಮಗೊಳಿಸಲು ಹಾಲು ಉತ್ಪಾದಕರ

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ ಮಾತನಾಡುತ್ತಾ, 1983ರಲ್ಲಿ ನಂದಿನಿ ಹೆಸರನ್ನು ತನ್ನ ಉತ್ಪನ್ನಗಳ ಬ್ರ್ಯಾಂಡ್ ಆಗಿ ಕೆ.ಎಂ.ಎಫ್ ಘೋಷಿಸಿತು. ನಂದಿನಿ ಎಂಬುದು ಹಿಂದೂ ದೇವತೆಯ ಹೆಸರು. ಹಾಗೆಯೇ ಗೋವಿನ ಹೆಸರುಗಳಲ್ಲಿ ಒಂದು. ಹೀಗಾಗಿ, ನಂದಿನಿ ಹೆಸರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

ಸಹಕಾರ ಸಂಘಗಳಿಂದ ಮಾತ್ರ ಸಾಧ್ಯ. ಗ್ರಾಮೀಣ ಪ್ರದೇಶದ ಮಹಿಳೆಯರು ಸಂಘಟಿತರಾಗಿ ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಸ್ಥಾಪಿಸಿಕೊಂಡು ತಮ್ಮ ಆರ್ಥಿಕ ಅಭಿವೃದ್ಧಿಯನ್ನು ಹೊಂದಲು ಪ್ರಯತ್ನಿಸಬೇಕೆಂದು ಹೇಳಿದರು.

ಯೂನಿಯನ್‌ನ ನಿರ್ದೇಶಕ ಶಿದ್ದನಗೌಡ ಬಿ.ಪಾಟೀಲ, ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಕೆ.ಸಿ. ಕೂಸನೂರಮಠ, ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ, ಧಾರವಾಡ ಹಾಲು ಒಕ್ಕೂಟದ ಧಾರವಾಡ ವ್ಯವಸ್ಥಾಪಕ ಡಾ. ರಾಕೇಶ ತಲ್ಲೂರ, ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥ ಪ್ರಸನ್ನ ಪಟ್ಟೇದ, ಹಾಲು ಒಕ್ಕೂಟದ ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕಿನ ವಿಸ್ತರಣಾಧಿಕಾರಿಗಳಾದ ಸಿ.ಎಸ್. ಕಲ್ಲನಗೌಡರ, ಬಸವರಾಜ ಎಸ್.ಜುಮ್ಮಣ್ಣವರ, ಉಮೇಶ ಹುಂಡೇಕಾರ ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಡಾ. ವೀರೇಶ ತರಲಿ, ಡಾ. ಎಂ.ಬಿ. ಮಡಿವಾಳರ, ಬಿ.ಪಿ. ಹಿರೇಮಠ ಉಪನ್ಯಾಸ ನೀಡಿದರು. ಯಳವತ್ತಿ ಹಾಗೂ ಕಡಕೋಳ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳಾದ ಗಂಗಾ ಫ.ಮಲ್ಲರಡ್ಡಿ ಹಾಗೂ ಭಾಗೀರಥಿ ಯ.ಭಂಡಾರಿ ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ವಿಸ್ತರಣಾಧಿಕಾರಿ ಸಿ.ಎಸ್. ಕಲ್ಲನಗೌಡರ ವಂದಿಸಿದರು.

# ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಿದರೆ ಸೂಕ್ತ ಕ್ರಮ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕೃತಕ ಅಭಾವ ಸೃಷ್ಟಿಸಿ ನಿಗದಿತ ಬೆಲೆಗಿಂತ ಹೆಚ್ಚಿನ ದರಕ್ಕೆ ಯೂರಿಯಾ ರಸಗೊಬ್ಬರ ಮಾರಾಟ ಮಾಡಿದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಾಲೂಕು ಸಹಾಯಕ ಕೃಷಿ ನಿರ್ದೇಶಕ ವಿ.ಸಿ. ಉಮೇಶ್ ಮಾರಾಟಗಾರರಿಗೆ ಎಚ್ಚರಿಕೆ ನೀಡಿದರು.

ಪಟ್ಟಣದ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಸ್ಥಳೀಯ ಕೃಷಿ ಅಧಿಕಾರಿಯೊಂದಿಗೆ ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿ ಅವರು ಮಾತನಾಡಿದರು.

ರಸಗೊಬ್ಬರ ಖರೀದಿಸಿದ ರೈತರಿಗೆ ಕಡ್ಡಾಯವಾಗಿ ನಿಗದಿತ ನಮೂನೆಯಲ್ಲಿ ರಸೀದಿ ನೀಡಬೇಕು. ಅಂಗಡಿಯ ಹೊರಗೆ ದಾಸ್ತಾನು ಲಭ್ಯತೆ ಮತ್ತು ದರಪಟ್ಟಿ ಹಾಕಬೇಕು. ತೂಕದ ಅಳತೆಯಲ್ಲಿ ವ್ಯತ್ಯಾಸ ಆಗದಂತೆ ನೋಡಿಕೊಳ್ಳಬೇಕು. ಕಳಪೆ ರಸಗೊಬ್ಬರ, ಬಿತ್ತನೆ ಬೀಜ ಹಾಗೂ ಯೂರಿಯಾ ಜೊತೆಗೆ ಲಿಂಕ್ ಮಾರಾಟ ಮಾಡುವುದು ಕಂಡು ಬಂದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ರೈತರು ಖಾಸಗಿ ಮಾರಾಟ ಮಳಿಗೆಗಳಿಂದ ಬೀಜ, ರಸಗೊಬ್ಬರ ಖರೀದಿಸುವಾಗ ತಪ್ಪದೇ ರಸೀದಿ ಪಡೆಯಬೇಕು. ಗರಿಷ್ಠ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರೆ ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳಿಗೆ ದೂರು ನೀಡಬೇಕು ಎಂದು ಸೂಚಿಸಿದರು.

ಮಣ್ಣು ಮತ್ತು ಪರಿಸರದ ಆರೋಗ್ಯದ ದೃಷ್ಟಿಯಿಂದ ಮೇಲುಗೊಬ್ಬರವಾಗಿ ಹರಳು ರೂಪದ ಯೂರಿಯಾ ರಸಗೊಬ್ಬರದ ಪರ್ಯಾಯವಾಗಿ ದ್ರವರೂಪದ ನ್ಯಾನೋ ಯೂರಿಯಾ ಬಳಸುವುದರಿಂದ ಉತ್ತಮ ಬೆಳೆ ಮತ್ತು ಹೆಚ್ಚಿನ ಇಳುವರಿಯನ್ನು ಪಡೆಯಬಹುದು ಎಂದು ತಿಳಿಸಿದರು.

### ಶಿರಹಟ್ಟಿ ತಾಲೂಕಿನಲ್ಲಿ 5396 ಅರ್ಜಿಗಳಲ್ಲಿ 2454 ವಿತರಣೆ, 2942 ಬಾಕಿ

# ಪೋತಿ ಆಂದೋಲನ ಮನೆ ಬಾಗಿಲಿಗೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯ ಸರಕಾರದ ನಿರ್ದೇಶನದಂತೆ ಪಹಣಿ ಪತ್ರಿಕೆಗಳಲ್ಲಿ ಪೋತಿಯಾದ ಖಾತಾ ಪ್ರಕರಣಗಳ ಇತ್ಯರ್ಥಕ್ಕಾಗಿ ಪೋತಿ ಆಂದೋಲನವನ್ನು ಜಾರಿಗೊಳಿಸಿದ್ದು, ಇದರ ಪ್ರಯುಕ್ತ ಶಿರಹಟ್ಟಿ ತಾಲೂಕಿನಲ್ಲಿ ತಾಲೂಕಾಡಳಿತದ ವತಿಯಿಂದ ಪೋತಿ ಆಂದೋಲನ ಯಶಸ್ವಿಗೆ ಗ್ರಾಮ ಆಡಳಿತ ಅಧಿಕಾರಿಗಳು ಪೋತಿಯಾಗಿರುವ ಕುಟುಂಬಗಳ ಮನೆ ಮನೆಗೆ ಭೇಟಿ ನೀಡುತ್ತಿದ್ದಾರೆ. ಶಿರಹಟ್ಟಿ ತಾಲೂಕಿನಲ್ಲಿ ಕಂದಾಯ ಇಲಾಖೆಯ ವತಿಯಿಂದ ಪಹಣಿಗಳಲ್ಲಿ ಗ್ರಾಮವಾರು ಪೋತಿಯಾಗಿರುವವರ ಪಟ್ಟಿ ಮಾಡಿದ ಪ್ರಕಾರ 5396 ಕುಟುಂಬಗಳ ಪೈಕಿ ಈಗಾಗಲೇ 2454 ಅರ್ಜಿಗಳನ್ನು ಸಂಬಂಧಿಸಿದ ವಾರಸುದಾರರಿಗೆ ಹಕ್ಕು



ದಾಖಲೆ ಮಾಡಿಕೊಡಲಾಗಿದ್ದು, ಇನ್ನೂ 2942 ಅರ್ಜಿಗಳನ್ನು ಇತ್ಯರ್ಥಪಡಿಸುವುದಕ್ಕೆ ಗ್ರಾಮ ಆಡಳಿತ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಸಂಬಂಧಿಸಿದ ವಾರಸುದಾರರ ಅವಶ್ಯಕ ದಾಖಲೆಯನ್ನು ಪಡೆದು ಸ್ಥಳದಲ್ಲಿಯೇ ಸರಕಾರ ಅಭಿವೃದ್ಧಿಪಡಿಸಿದ ಮೊಬೈಲ್ ಆ್ಯಪ್ ಮೂಲಕ ಅರ್ಜಿಗಳನ್ನು ಅಪ್‌ಲೋಡ್ ಮಾಡಿ, 15 ದಿನಗಳಲ್ಲಿ ಸಂಬಂಧಿಸಿದ ವಾರಸುದಾರರಿಗೆ ಪಹಣಿ ಪತ್ರಿಕೆಗಳನ್ನು ನೀಡಲಿದ್ದಾರೆ.

ಆಂದೋಲನದ ಯಶಸ್ವಿಗೆ ಸ್ವತಃ ತಹಸೀಲ್ದಾರ ಕೆ.ರಾಘವೇಂದ್ರ ರಾವ್ ನೇತೃತ್ವದ ತಂಡ ಜು.19ರಂದು ಮಾಚೇನಹಳ್ಳಿ ಗ್ರಾಮದಲ್ಲಿ, 21ರಂದು ಇಟಗಿ, 23ರಂದು ಮಜ್ಜೂರ, 28ರಂದು ಕೋಗನೂರ, 31ರಂದು ಹೆಬ್ಬಾಳ, ಅಗಷ್ಟ 2ರಂದು ನಾಗರಮಡುವು, 11ರಂದು ರಣತೂರ, 13ರಂದು ಬೆಳ್ಳಟ್ಟಿ, 19ರಂದು ಹೊಸೂರ, 22ರಂದು ವಡವಿ, 29ರಂದು ಚಿಕ್ಕಸವಣೂರ, ಸೆಪ್ಟೆಂಬರ್ 3ರಂದು ತಾರೀಕೊಪ್ಪ, 8ರಂದು ಸಾಸರವಾಡ, 11ರಂದು ಕಡಕೋಳ, 15ರಂದು ಬನ್ನಿಕೊಪ್ಪ, 16ರಂದು ಶಿರಹಟ್ಟಿ ಪಟ್ಟಣದಲ್ಲಿ ವಿಶೇಷ ಕ್ಯಾಂಪ್‌ಗಳನ್ನು ನಿಗದಿಪಡಿಸಲಾಗಿದೆ.

ಈ ಆಂದೋಲನದ ಕುರಿತು ಗ್ರಾಮೀಣ ಭಾಗಗಳಲ್ಲಿಯ ಜನತೆಗೆ ಹೆಚ್ಚಿನ ರೀತಿಯಲ್ಲಿ ಜಾಗೃತಿ ಮೂಡಿಸುವುದು ಅವಶ್ಯವಿದ್ದು, ತಾಲೂಕಾ ಆಡಳಿತ ಈ ಬಗ್ಗೆ ಹೆಚ್ಚಿನ ಗಮನಹರಿಸಿದಲ್ಲಿ ಆಂದೋಲನ ಯಶಸ್ವಿಯಾಗಲು ಸಾಧ್ಯ. ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ ಕೆ.ರಾಘವೇಂದ್ರ ರಾವ್, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವುದಕ್ಕಾಗಿ ಪೋತಿ ಆಂದೋಲನದ ಮೂಲಕ ಪಹಣಿಯಲ್ಲಿಯ ಮೃತರ ವಾರಸುದಾರರಿಗೆ ಹಕ್ಕು ದಾಖಲೆಯನ್ನು ನೀಡಲಾಗುತ್ತಿದೆ. ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ತಮ್ಮ ಮನೆಗೆ ಭೇಟಿ ನೀಡಿದಾಗ ಅವಶ್ಯಕ ದಾಖಲೆಗಳನ್ನು ನೀಡಿ ಆಂದೋಲನವನ್ನು ಯಶಸ್ವಿಗೊಳಿಸಲು ಸಹಕರಿಸಬೇಕೆಂದು ವಿನಂತಿಸಿದರು.


### ಮಣ್ಣಿನ ಭೌತಿಕ, ರಾಸಾಯನಿಕ ಹಾಗೂ ಜೈವಿಕ ಆರೋಗ್ಯವನ್ನು ಕಾಪಾಡಿ

# ಮಣ್ಣು ಆರೋಗ್ಯ ಚೀಟಿ ತಿಳುವಳಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಣ್ಣು ಪರೀಕ್ಷೆಯು ಕೃಷಿ ಇಲಾಖೆಯ ಮೂಲಭೂತ ಕಾರ್ಯಕ್ರಮಗಳಲ್ಲಿ ಒಂದಾಗಿದ್ದು, ಸಮತೋಲನ ಮತ್ತು ಸಮಗ್ರ ರಸಗೊಬ್ಬರಗಳ ಬಳಕೆ ಹಾಗೂ ಮಣ್ಣು ಆರೋಗ್ಯ ಸಂರಕ್ಷಣೆ ಮತ್ತು ಸುಧಾರಣೆ ಕೈಗೊಳ್ಳಲು ಆಧುನಿಕ ಕೃಷಿ ಉತ್ಪಾದನೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಮಣ್ಣು ಪರೀಕ್ಷೆ ಆಧಾರದ ಮೇಲೆ ರೈತರು ಬೆಳೆಗಳಿಗೆ ಸಮತೋಲಿತ ರಸಗೊಬ್ಬರಗಳ ಬಳಕೆ ಹಾಗೂ ಸಮಗ್ರ ಸಸ್ಯ ಪೋಷಕಾಂಶಗಳ ನಿರ್ವಹಣೆ ಮಾಡುವುದರಿಂದ ಮಣ್ಣು ಆರೋಗ್ಯವನ್ನು ಮತ್ತು ಭೂ ಫಲವತ್ತತೆಯನ್ನು ನಿರಂತರವಾಗಿ ಕಾಪಾಡಿಕೊಂಡು ಬೆಳೆ ಉತ್ಪಾದಕತೆಯನ್ನು ಹೆಚ್ಚಿಸಲು ಸಾಧ್ಯವಾಗುತ್ತದೆ.

ಮಣ್ಣು ಆರೋಗ್ಯ ಚೀಟಿಗಳನ್ನು ಇಲಾಖೆಯಿಂದ ಪ್ರತಿ ವರ್ಷವೂ



ರೈತರಿಗೆ ವಿತರಿಸಲಾಗುತ್ತಿದೆ. ರೈತರು ಶಿಫಾರಸ್ಸುಗಳನ್ನು ಅಳವಡಿಸಿಕೊಂಡಾಗ ಮಾತ್ರ ಮಣ್ಣು ಆರೋಗ್ಯ ಚೀಟಿಗಳ ಉದ್ದೇಶ ಸಾರ್ಥಕವಾಗುತ್ತದೆ. ಆದುದರಿಂದ ಮಣ್ಣು ಆರೋಗ್ಯ ಚೀಟಿಗಳಲ್ಲಿಯ ಶಿಫಾರಸ್ಸುಗಳನ್ನು ರೈತರಿಗೆ ವಿವರವಾಗಿ ತಿಳಿಸಲು ಇಲಾಖೆಯು ಕೃಷಿ ಸಖಿಯರ ಸೇವೆಯನ್ನು ಪಡೆಯಲು ಮುಂದಾಗಿದೆ.

ಸ್ಥಳೀಯವಾಗಿ ಕಾರ್ಯ ನಿರ್ವಹಿಸುತ್ತಿರುವ ಕೃಷಿ ಸಖಿ/ಸಮುದಾಯ ಸಂಪನ್ಮೂಲ ವ್ಯಕ್ತಿಗಳನ್ನು ಬಳಸಿಕೊಂಡು ಮಣ್ಣು ಆರೋಗ್ಯ ಚೀಟಿಗಳಲ್ಲಿ ರೈತರ ತಾಕುಗಳ ಪೋಷಕಾಂಶಗಳ ಲಭ್ಯತೆಯನ್ನು ವಿವರಿಸಲಾಗುವುದು. ರೈತರು ತಮ್ಮ ತಾಕುಗಳಲ್ಲಿ ಸಾವಯವ ಇಂಗಾಲ, ರಸಸಾರ, ಮುಖ್ಯ ಪೋಷಕಾಂಶಗಳು, ಲಘು ಪೋಷಕಾಂಶಗಳು, ಕ್ಷಾರ/ಆಮ್ಲಸ್ಥಿತಿ ಇತ್ಯಾದಿಗಳನ್ನು ಅರಿತು, ಆ ಪ್ರಕಾರ ತಮ್ಮ ತಾಕುಗಳಲ್ಲಿ ಉಪಯೋಗಿಸುವ ಸಾವಯವ ಗೊಬ್ಬರ, ರಾಸಾಯನಿಕ ಗೊಬ್ಬರ ಇತ್ಯಾದಿಗಳ ಪ್ರಮಾಣಗಳನ್ನು ನಿರ್ಧರಿಸಬಹುದಾಗಿದೆ.

ರಾಜ್ಯದ ರೈತ ಹಿಡುವಳಿದಾರರಿಗೆ ಮಣ್ಣು ಆರೋಗ್ಯ ಚೀಟಿ ವಿತರಿಸುವುದು ಹಾಗೂ ಪೋಷಕಾಂಶಗಳ ಕೊರತೆ ನೀಗಿಸಲು ಮಣ್ಣು ಪರೀಕ್ಷೆ ಆಧಾರಿತ ರಸಗೊಬ್ಬರ ಬಳಕೆ ಮಾಡಲು ಪ್ರೋತ್ಸಾಹಿಸುವುದು ಇಲಾಖೆಯ ಪ್ರಮುಖ ಆದ್ಯತೆಗಳಲ್ಲೊಂದಾಗಿದೆ.

ಇದರಿಂದ ಮಣ್ಣಿನ ಭೌತಿಕ, ರಾಸಾಯನಿಕ ಹಾಗೂ ಜೈವಿಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದಾಗಿದೆ. ಅಧಿಕ ಉತ್ಪಾದನೆಗೆ ಭೂ ಫಲವತ್ತತೆಗೆ ಸಂಬಂಧಿಸಿದ ಅಪಾಯಗಳನ್ನು ನಿಯಂತ್ರಿಸಲು ಪೋಷಕಾಂಶಗಳ ಸಮತೋಲನ ಬಳಕೆಯನ್ನು ಪ್ರೋತ್ಸಾಹಿಸಲಾಗುತ್ತಿದೆ. ಅಲ್ಲದೇ, ರಸಗೊಬ್ಬರಗಳು ಹಾಗೂ ರಾಸಾಯನಿಕಗಳ ಉಪಯೋಗದಿಂದ ಆಗಬಹುದಾದ ಹೆಚ್ಚುವರಿ ವೆಚ್ಚವನ್ನು ನಿಯಂತ್ರಿಸಬಹುದಾಗಿದೆ.

ರೈತ ಬಾಂಧವರು ಬೆಳೆ ಪರಿವರ್ತನೆ, ಅಂತರ್ ಬೆಳೆ ಪದ್ಧತಿ, ಸಮಗ್ರ ಕೃಷಿ ಪದ್ಧತಿ, ಸಾವಯವಕೃಷಿ ಹಾಗೂ ನೈಸರ್ಗಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡಲ್ಲಿ ಮಣ್ಣು ಆರೋಗ್ಯವನ್ನು ಉತ್ತಮಗೊಳಿಸಬಹುದಾಗಿದೆ. ರೈತ ಬಾಂಧವರು ಮಣ್ಣು ಆರೋಗ್ಯ ಚೀಟಿಗಳಲ್ಲಿನ ಶಿಫಾರಸ್ಸುಗಳನ್ನು ಕಡ್ಡಾಯವಾಗಿ ಪಾಲಿಸಲು ಜಂಟಿಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿತಿಳಿಸಿದ್ದಾರೆ.

# ಸನ್ಮಾರ್ಗ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿನಿಯ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

2020-21ರ ಶೈಕ್ಷಣಿಕ ವರ್ಷದಲ್ಲಿ ಸನ್ಮಾರ್ಗ ಕಾಲೇಜಿನಲ್ಲಿ ವಿದ್ಯಾರ್ಜನೆಗೈದು ಇದೀಗ ಅಮೆಜಾನ್ ವೆಬ್ ಸರ್ವೀಸಸ್(A.W.S) ಕಂಪನಿಯಲ್ಲಿ ವರ್ಷಕ್ಕೆ 22 ಲಕ್ಷ ರೂ ಪ್ಯಾಕೇಜ್‌ನ ಉದ್ಯೋಗವನ್ನು ಗಿಟ್ಟಿಸಿಕೊಂಡಿರುವ ಸುಮನ್ ಪಾಟೀಲರನ್ನು ಕಾಲೇಜಿನ ವತಿಯಿಂದ ಅಭಿನಂದಿಸಲಾಯಿತು.

ವಿದ್ಯಾರ್ಥಿನಿಯ ಈ ಅಮೋಘ ಸಾಧನೆಗೆ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ನಿರ್ದೇಶಕರಾದ ಪ್ರೊ. ರಾಹುಲ ಒಡೆಯರ್, ಪ್ರೊ. ರೋಹಿತ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಹಾಗೂ ಕಾಲೇಜಿನ ಸಮಸ್ತ ಬೋಧಕ-ಬೋಧಕೇತರ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಕಾಂಗ್ರೆಸ್ ಸಾಧನಾ ಸಮಾವೇಶ ಒಂದು ಡ್ರಾಮಾ: ಸಚಿವ ವಿ. ಸೋಮಣ್ಣ!

■ವಿಜಯಸಾಕ್ಷಿ ಸುದ್ದಿ, ಚಾಮರಾಜನಗರ

ಸಿಎಂ ಬದಲಾವಣೆಗೆ ಸಿದ್ದರಾಮಯ್ಯ ಮೈಂಡ್ ಸೆಟ್ ಆಗಿದೆ ಎಂದು ಕೇಂದ್ರ ಸಚಿವ ಸೋಮಣ್ಣ ವ್ಯಂಗ್ಯವಾಡಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನಾಳೆಯ ಕಾಂಗ್ರೆಸ್ ಸಾಧನಾ ಸಮಾವೇಶ ಒಂದು ಡ್ರಾಮಾ ಎಂದು ವ್ಯಂಗ್ಯವಾಡಿದರು. ಆಡಳಿತ ಕುಸಿದಾಗ ಸಮಾವೇಶದ ಡ್ರಾಮಾ ಮಾಡುತ್ತಿದ್ದಾರೆ. ಹಿಂದಿನ



ಸಿದ್ದರಾಮಯ್ಯ ಕಳೆದು ಹೋಗಿದ್ದಾರೆ. ರಾಜ್ಯ ಸರ್ಕಾರದಲ್ಲಿ ಹಣ ಇಲ್ಲ, ಪಾಪರ್ ಆಗಿದೆ. ಕೇಂದ್ರ ಸರ್ಕಾರ ನೀಡುವ ಅನುದಾನದಲ್ಲಿ ಕೆಲಸ ಮಾಡುತ್ತಿದೆ. ನಾವು ಕೊಡುವ ಯೋಜನೆ ಒಂದಾದರೆ, ಇವರು ಖರ್ಚು ಮಾಡುವುದೇ ಒಂದು. ಕಾಂಗ್ರೆಸ್‌ನಲ್ಲಿ ಹೈಕಮಾಂಡ್ ದೊಡ್ಡದು. ಏನು ಒಳ ಒಪ್ಪಂದ ಆಗಿದೆ ಅಂತಾ ಜ.26 ರೊಳಗೆ ಗೊತ್ತಾಗುತ್ತದೆ ಎಂದರು.

ನಮಗಿಂತ ಹೆಚ್ಚಾಗಿ ಸಿದ್ದರಾಮಯ್ಯನವರಿಗೆ ಒಪ್ಪಂದದ ಬಗ್ಗೆ ಗೊತ್ತಿದೆ. ಬದಲಾವಣೆಗೆ ಸಿದ್ದರಾಮಯ್ಯನವರ ಮೈಂಡ್ ಸೆಟ್ ಆಗಿದೆ ಎಂದರು.


# ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವನೆ, ಸಂಘಟನಾ ಮನೋಭಾವನೆಗಳೊಂದಿಗೆ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವ ಛಲ ಇರಬೇಕೆಂದು ಸ್ವಾಮಿ ವಿವೇಕಾನಂದ ಕಾಲೇಜಿನ ಪ್ರಾಂಶುಪಾಲರಾದ ಪ್ರಿಯಾ ಎಮ್.ಪಾಟೀಲರು ಹೇಳಿದರು.

ಕಾಲೇಜಿನಲ್ಲಿ ಶುಕ್ರವಾರ ನಡೆದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೇಯಾ ಹಿರೇಮಠ ಪ್ರಾರ್ಥಿಸಿದರು. ಭುವನೇಶ್ವರಿ




ಚವರಡ್ಡಿ ಸ್ವಾಗತಿಸಿದರು. ಪ್ರಶಾಂತ ಮುಂಡಾಸದ ಹಾಗೂ ಸುಷ್ಮಾ ಪೂಜಾರ ನಿರೂಪಿಸಿದರು. ಉಜ್ಮಾ ನೂರೈನ ವಂದಿಸಿದರು. ಸೃಷ್ಟಿ ಮುಂಡಾಸದ, ವರ್ಷಾ ಕೋಡಿಕೊಪ್ಪ, ಪ್ರಗತಿ ಮಾಡಳ್ಳಿ, ಅಭಿಷೇಕ ಹಿರೇಮಠ, ಹಾಗೂ ಅಪೂರ್ವ ಹುದ್ದಾರ ಮನರಂಜನಾ ಕಾರ್ಯಕ್ರಮ ನಡೆಸಿಕೊಟ್ಟರು. ಸಮಾರಂಭದಲ್ಲಿ ಕಾಲೇಜಿನ ಪ್ರಾಚಾಯರು, ಉಪನ್ಯಾಸಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಅವಳಿ ನಗರಕ್ಕೆ ಮಳೆಗಾಲದಲ್ಲಿಯೂ ನೀರಿನ ಬರ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ನಗರಕ್ಕೆ ಸುಮಾರು 20 ದಿನಗಳಿಂದ ಕುಡಿಯುವ ನೀರಿನ ಅಭಾವ ಇದ್ದು, ಅಭಿವೃದ್ಧಿ ಹೊಂದಿದ ಪ್ರದೇಶದ ಜನರು ಮನೆಯಲ್ಲಿ ಕೊಳವೆ ಬಾವಿ ಹಾಗೂ ನೀರಿನ ಟ್ಯಾಂಕ್ ಹೊಂದಿದ್ದಾರೆ. ಅವರಿಗೆ ವ್ಯತ್ಯಾಸವಾಗದಿದ್ದರೂ, ನಗರದ ಶೇ.75ರಷ್ಟು ಜನರು ದಿನನಿತ್ಯ ಕೂಲಿ ಕೆಲಸ ಮಾಡಿ ಜೀವನ ನಡೆಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರು 20 ದಿನಗಳಿಗೊಮ್ಮೆ ಪೂರೈಕೆಯಾಗುವುದರಿಂದ ಜನ ಸಾಮಾನ್ಯರು ತಮ್ಮ ಕೆಲಸಗಳನ್ನು ಬದಿಗೊತ್ತಿ ದುಡಿಮೆ ಕಳೆದುಕೊಂಡು ನೀರಿಗಾಗಿ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್. ಕೊಪ್ಪಳ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗದಗ ನಗರಕ್ಕೆ ಕುಡಿಯುವ ನೀರು ಪೂರೈಸಲು ಇದುವರೆಗೂ ಯಾವುದೇ ಪರ್ಯಾಯ ಮಾರ್ಗ ಅನುಸರಿಸದಿರುವುದು ಗದುಗಿನ ಜನರ ದುರಾದೃಷ್ಟ. ಅಭಿವೃದ್ಧಿ ಹೊಂದಿದ ನಗರಗಳನ್ನು ವೀಕ್ಷಿಸಿದಾಗ ನಮ್ಮ ಗದಗ ನಗರ ಯಾವುದೋ ಶಾಪಕ್ಕೆ ಗುರಿಯಾದಂತೆ ಗೋಚರವಾಗುತ್ತದೆ. ಕಾರಣ, ಜಿಲ್ಲಾ ಉಸ್ತುವಾರಿ ಸಚಿವರು ಗದಗ ನಗರಕ್ಕೆ ಸಮರ್ಪಕವಾಗಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹಿಸಿದ್ದಾರೆ.

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ವಿಜ್ಞಾನದ ಪ್ರಗತಿಗೆ ದೇಹದಾನ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಗದಗ

'ಇಟ್ಟರೆ ಸಗಣಿಯಾದೆ, ತಟ್ಟಿದರೆ ಕುರುಳಾದೆ, ಸುಟ್ಟರೆ ನೊಸಲಿಗೆ ವಿಭೂತಿಯಾದೆ, ನೀನಾರಿಗಾದೆಯೋ ಮಾನವ' ಇಂದು ಈ ಮಾತು ಬದಲಾವಣೆಯಾಗಿದೆ. ಮಾನವನ ಎಲ್ಲಾ ಅಂಗಾಂಗಗಳು ಸತ್ತ ನಂತರವೂ ಉಪಯೋಗಕ್ಕೆ ಬರುತ್ತವೆ. ಈ ಮಹಾನ್ ಕಾರ್ಯಕ್ಕೆ ಬದುಕಿದ್ದಾಗಲೇ ಮನಸ್ಸು ಮಾಡಬೇಕು. ದೇಹದಾನ ಮಾಡಿದ ಕೌತಾಳ ವೀರಪ್ಪನವರ ಬದುಕು ಸಾರ್ಥಕವಾದುದು ಎಂದು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2754ನೇ ಶಿವಾನುಭವದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ದೇಹದಾನ ಇದೊಂದು ಸಮಾಜ ಸೇವೆ. ದೇಹದಾನ ವೈದ್ಯಕೀಯ ವಿದ್ಯಾರ್ಥಿಗಳಿಗೆ ಅಂಗರಚನಾ ಶಾಸ್ತ್ರದ ಅಧ್ಯಯನಕ್ಕಾಗಿ ಅನುಕೂಲವಾಗುತ್ತದೆ. ವಿಜ್ಞಾನದ ಪ್ರಗತಿಗೆ, ವೈದ್ಯಕೀಯ ಸಂಶೋಧನೆಗೆ ದೇಹದಾನ ಮುಖ್ಯವಾಗಿದೆ



ಎಂದು ಆಶೀರ್ವಚನ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ. ಜಿ.ಬಿ. ಪಾಟೀಲ್, 2017ನೇ ಸಾಲಿನ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷರಾದ ಎಂ.ಸಿ. ಐಲಿ ಮಾತನಾಡಿದರು. ಗುರುನಾಥ್ ಸುತಾರ ಹಾಗೂ ಸವಿತಾ ಕುಪ್ಪಸದ ಸಂಗೀತ ಸೇವೆಯನ್ನು ನೆರವೇರಿಸಿದರು. ಧಾರ್ಮಿಕ ಗ್ರಂಥ ಪಠಣವನ್ನು ಹರ್ಷಿತಾ ಬಿ.ಬಳಿಗೇರ ಹಾಗೂ ವಚನ ಚಿಂತನವನ್ನು ರಕ್ಷಿತಾ ಬಿ.ಬಳಿಗೇರ ಮಾಡಿದರು. ದಾಸೋಹ ಸೇವೆಯನ್ನು ವೈಜನಾಥ ಕೌತಾಳ ಹಾಗೂ ಕುಟುಂಬ ವರ್ಗ ಹಾಗೂ 2017ನೇ ಸಾಲಿನ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷರಾದ ಎಂ.ಸಿ. ಐಲಿ ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ ಹಾಗೂ ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು. ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಗದುಗಿನ ಡಿ.ಜಿ.ಎಂ ಆಯುರ್ವೇದ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಸ್.ಬಿ. ಗೋವಿಂದಪ್ಪ ಮರಣಾನಂತರ ದೇಹದಾನ ಹಾಗೂ ಅಂಗಾಂಗ ದಾನ ವಿಷಯ ಕುರಿತು ಮಾತನಾಡುತ್ತಾ, ಮರಣಾನಂತರ ವ್ಯಕ್ತಿಯ ಶರೀರ ಉಪಯೋಗವಾದರೆ ಅವನೇ ಉತ್ತಮ ಮಾನವ. ಎಲ್ಲಾ ದಾನಗಳಿಗಿಂತ ದೇಹದಾನ ಮುಖ್ಯವಾದುದು. ದೇಹದಾನ ಮಾಡಿದ ವ್ಯಕ್ತಿಗೆ ಸ್ವರ್ಗ ಪ್ರಾಪ್ತಿಯಾಗುತ್ತದೆ. ಕಣ್ಣು, ಮೆದುಳು ಹೀಗೆ ಮಾನವನ 26 ಅಂಗಾಂಗಗಳು ಉಪಯೋಗಕ್ಕೆ ಬರುತ್ತವೆ ಎಂದು ಮಾಹಿತಿ ನೀಡಿದರು.

### ಕ್ಯಾನ್ಸರ್, ಚರ್ಮ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಡಾ. ಸಂಜೀವ ಕುಲಕರ್ಣಿ

# ಆರೋಗ್ಯಕರ ಹವ್ಯಾಸಗಳನ್ನು ರೂಢಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಸದೃಢ ಯುವಕರಿಂದ ಸದೃಢ ದೇಶ ನಿರ್ಮಾಣಗೊಳ್ಳಲು ಸಾಧ್ಯ. ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಬೆಂಗಳೂರಿನ ಶಂಕರ ಕ್ಯಾನ್ಸರ್ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಯ ಡಾ. ಸಂಜೀವ ಕುಲಕರ್ಣಿ ಹೇಳಿದರು.

ಅವರು ಗದುಗಿನ ಲಯನ್ಸ್ ಶಾಲೆಯ ಸಭಾಂಗಣದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಗದಗ ಸನ್ಮಾರ್ಗ ಕಾಲೇಜು, ಗದಗ ಐಎಂಎ, ಗದಗ ಚರ್ಮರೋಗ ತಜ್ಞರ ಸಂಘ, ಬೆಂಗಳೂರಿನ ಶಂಕರ ಕ್ಯಾನ್ಸರ್ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಯಿಂದ ಕ್ಯಾನ್ಸರ್ ಹಾಗೂ ಚರ್ಮ ಸುರಕ್ಷತೆ ಕುರಿತು ಏರ್ಪಡಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು.




ಡಾ. ಸುಪ್ರೀತ್ ಅವರು ಗರ್ಭಕಂಠ ಮತ್ತು ಸ್ತನ ಕ್ಯಾನ್ಸರ್ ಕಾರಣಗಳು, ಅಪಾಯಕಾರಿ ಅಂಶಗಳು, ಲಕ್ಷಣಗಳು ಮತ್ತು ಆಧುನಿಕ ಚಿಕಿತ್ಸಾ ವಿಧಾನಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಡಾ. ತುಕಾರಾಂ ಸೂರಿ ಅವರು ಚರ್ಮ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸಿದರು.

ಧೂಮಪಾನ, ತಂಬಾಕು ಮದ್ಯಪಾನ ಕ್ಯಾನ್ಸರ್‌ಗೆ ಜಗಿಯುವದು ಹಾಗೂ ಪ್ರಮುಖ ಕಾರಣಗಳಾಗಿವೆ. ಯುವಕರು ಅದರಲ್ಲೂ ವಿಶೇಷವಾಗಿ ಹೈಸ್ಕೂಲ್-ಕಾಲೇಜು ವಿದ್ಯಾರ್ಥಿಗಳು ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ಪೌಷ್ಟಿಕ ಮತ್ತು ಸಾತ್ವಿಕ ಆಹಾರ ಸೇವನೆ, ವಾಯು ವಿಹಾರ, ಯೋಗ, ಧ್ಯಾನ, ಆಧ್ಯಾತ್ಮಿಕತೆಯಿಂದ ತಮ್ಮ ಜೀವನ ಶೈಲಿಯನ್ನು ಬದಲಿಸಿಕೊಂಡರೆ ಜೀವನ ಸನ್ಮಾರ್ಗದಲ್ಲಿ ಹಾಗೂ ಸದೃಢ ಆರೋಗ್ಯದಲ್ಲಿ ಸಾಗುವದು ಎಂದರು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವರ್ಣೇಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ವಲಯ ಅಧ್ಯಕ್ಷ ರಮೇಶ ಶಿಗ್ಲಿ, ಸದಸ್ಯರಾದ ಮಂಜುನಾಥ ವೀರಲಿಂಗಯ್ಯನಮಠ, ವೀರಣ್ಣ ಪಟ್ಟಣಶೆಟ್ಟಿ, ಶ್ಯಾಮ್ ಮಿಸ್ಕಿನ್, ಕಾರ್ತಿಕ ಪಾಲನಕರ ಹಾಗೂ ಲಯನ್ಸ್ ಮಹಿಳಾ ಘಟಕದ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಸದಸ್ಯರಾದ ವೀಣಾ ಸುಲಾಖೆ, ಅನುರಾಧಾ ಮಿಸ್ಕಿನ್ ಸೇರಿದಂತೆ ವೈದ್ಯರು, ಉಪನ್ಯಾಸಕರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನೂತನ ಪೋಲೀಸ್ ವರಿಷ್ಠಾಧಿಕಾರಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಗೆ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ನೇಮಕಗೊಂಡಿರುವ ರೋಹನ್ ಜಗದೀಶ್ ಅವರನ್ನು ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಧ್ಯಕ್ಷ ಶಿವಕುಮಾರ್ ಚ.ರಾಮನಕೊಪ್ಪ ಮಾತನಾಡಿ, ನ್ಯಾಯ ಪಾಲನೆ, ಶಿಸ್ತಿನ ವ್ಯವಸ್ಥೆ ಹಾಗೂ ಸಾರ್ವಜನಿಕರ ಭದ್ರತೆಯ ಸಂಕೇತವಾಗಿ ನಿಲ್ಲುವಂತಹ ವ್ಯಕ್ತಿತ್ವ ರೋಹನ್ ಜಗದೀಶ್ ಅವರದ್ದು. ಅವರ ನೇತೃತ್ವದಲ್ಲಿ ಜಿಲ್ಲೆ ಮುನ್ನಡೆಯುವದು ನಿಶ್ಚಿತ ಎಂದರು.

ರಾಜಾಧ್ಯಕ್ಷ ಪಿ.ಸುಬ್ರಮಣ್ಯಂ ರೆಡ್ಡಿ ಅಭಿನಂದನೆ ಸಲ್ಲಿಸಿ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ, ಸಾರ್ವಜನಿಕರ ಹಿತರಕ್ಷಣೆ ಹಾಗೂ ಭ್ರಷ್ಟಾಚಾರದ ವಿರುದ್ಧ ನಿರ್ಭೀತಿಯಿಂದ ಕಾರ್ಯ ನಿರ್ವಹಿಸಬಲ್ಲ ರೋಹನ್ ಜಗದೀಶ್ ಅವರ ಸೇವೆ ನಮಗೆ ಆಶಾಕಿರಣವಾಗಿರಲಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಮಿಕ ಘಟಕ ರಾಜ್ಯಾಧ್ಯಕ್ಷ ಶಿವಾನಂದಯ್ಯ ಹಿರೇಮಠ, ಗಣ್ಯರಾದ ಎಸ್.ಎಸ್. ರಡ್ಡೇರ, ರೈತ ಘಟಕ ರಾಜ್ಯಾಧ್ಯಕ್ಷ ಎಸ್.ವಿ. ಪಲ್ಲೇದ, ರಾಜ್ಯ ಪ್ರಧಾನ ಕಾರ್ಯದರ್ಶಿ ಯು. ಆರ್. ಭೂಸನೂರಮಠ, ರಾಜ್ಯ ಕಾರ್ಯದರ್ಶಿ ಹುಚ್ಚಣ್ಣವರ, ಜಿಲ್ಲಾ ಕಾರ್ಯದರ್ಶಿ ಷಣ್ಮುಖ ಸುಲಾಖೆ, ರಾಜ್ಯ ವಕ್ತಾರ ಪ್ರಭಾಕರ್ ಹೆಬಸೂರ, ರಾಜ್ಯ ನಿರ್ದೇಶಕ ಎಮ್. ಎಸ್. ಪರ್ವತಗೌಡ್ರ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಕಾರ್ಮಿಕರ ಕುಂದು-ಕೊರತೆಗಳನ್ನು ನಿವಾರಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕರ ಕುಂದು-ಕೊರತೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಮಿಕ ಘಟಕದ ಗದಗ ಜಿಲ್ಲಾಧ್ಯಕ್ಷ ತೌಸಿಫ ಢಾಲಾಯತ ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ತೌಸಿಫ ಢಾಲಾಯತ ಮಾತನಾಡಿ, ಕಟ್ಟಡ ಕಾರ್ಮಿಕರ ಲೇಬರ್ ಕಾರ್ಡ್‌ಗಳ ನವೀಕರಣ ಮೊದಲು ಮೂರು ವರ್ಷಕ್ಕೊಮ್ಮೆ ಇತ್ತು. ಈಗ ಪ್ರತಿ ವರ್ಷವೂ ನವೀಕರಣ ಮಾಡುತ್ತಿರುವುದರಿಂದ ಕಟ್ಟಡ ಕಾರ್ಮಿಕರಿಗೆ ತೊಂದರೆಯಾಗುತ್ತಿದೆ. ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್‌ಶಿಪ್ ಕಳೆದ ಎರಡು ವರ್ಷಗಳಿಂದ ಸರಿಯಾಗಿ ಬರುತ್ತಿಲ್ಲ. ಇದರಿಂದ ಮಕ್ಕಳಿಗೆ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿದೆ. ಕಾರ್ಮಿಕ ಇಲಾಖೆಯಿಂದ ಆರೋಗ್ಯ ತಪಾಸಣೆ ಶಿಬಿರವನ್ನು ಮಾಡುತ್ತಿದ್ದು, ಇದು ಸಹ ಕಾರ್ಮಿಕರಿಗೆ ಪ್ರಯೋಜನವಾಗುತ್ತಿಲ್ಲ. ಇದನ್ನು ತಕ್ಷಣ ಸ್ಥಗಿತಗೊಳಿಸಿ ಇದೇ ಹಣದಲ್ಲಿ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್‌ಶಿಪ್ ನೀಡುವಂತೆ ವಿನಂತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಮಾಲಿಪಾಟೀಲ, ಜಿಲ್ಲಾ ಉಪಾಧ್ಯಕ್ಷ ವಿನಾಯಕ ಬದಿ, ಮುಳಗುಂದ ನಗರ ಘಟಕದ ಅಧ್ಯಕ್ಷ ಹುಸೇನ ಅಕ್ಕಿ, ಕುಮಾರ ರೇವಣ್ಣವರ, ದಾವಲಸಾಬ ತಹಸೀಲ್ದಾರ, ಇರ್ಫಾನ ತಾಳಿಕೋಟಿ, ನಿಯಾಜ್‌ಶೇಖ, ಯಲ್ಲಪ್ಪ ಭೋವಿ, ರಾಹುಲ ತೇರದಾಳ, ನಜೀರ ಎಲಿಗಾರ, ದಾದಾಪೀರ ನದಾಫ್, ಸುಲೇಮಾನ ಮಂಜಲಾಪೂರ, ಶಂಭು, ದುರಗಪ್ಪ ಭಜಂತ್ರಿ, ಶಬ್ಬೀರ ಚೌಧರಿ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮುಗಿಯದ ರಸ್ತೆ ಕಾಮಗಾರಿ; ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪ್ರಮುಖ ಬಜಾರ ರಸ್ತೆ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ ಪ್ರಾರಂಭಿಸಿ ಪೂರ್ಣಗೊಳಿಸುವಂತೆ ಶುಕ್ರವಾರ ವ್ಯಾಪಾರಸ್ಥರು, ಸಾರ್ವಜನಿಕರು ಪುರಸಭೆಗೆ ತೆರಳಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ವ್ಯಾಪಾರಸ್ಥ ರವಿ ಪುರಾಣಿಕಮಠ, ಪುರಸಭೆ 15ನೇ ಹಣಕಾಸಿನ 76 ಲಕ್ಷ ರೂ ಅನುದಾನದಲ್ಲಿ ಮುಖ್ಯ ಬಜಾರ್ ರಸ್ತೆಯ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ 260 ಮೀಟರ್ ರಸ್ತೆ ಅಭಿವೃದ್ಧಿ (ಸಿಸಿ) ಕಾಮಗಾರಿಯನ್ನು 3 ತಿಂಗಳ ಹಿಂದೆಯೇ ಪ್ರಾರಂಭಿಸಲಾಗಿದೆ. ಆದರೆ ಕಾಮಗಾರಿಗಾಗಿ ರಸ್ತೆ ಅಗೆದು ಬಿಟ್ಟಿದ್ದರಿಂದ ಮತ್ತು ಇದೀಗ ರಸ್ತೆ ಮಧ್ಯದಲ್ಲಿನ ರಾಜಕಾಲುವೆ



ಕುಸಿದು ರಸ್ತೆ ಸಂಚಾರ ಬಂದ್ ಆಗಿದೆ. ಈ ಮಾರ್ಗವಾಗಿಯೇ ದೂದಪೀರಾಂ ದರ್ಗಾ, ಕೋರ್ಟ್, ತಹಸೀಲ್ದಾರ್ ಕಚೇರಿ, ಶಾಲೆ ಸೇರಿ ನಿತ್ಯ ಕಾರ್ಯಕ್ಕೆ ಹೋಗಲು ರಸ್ತೆ ಇಲ್ಲದಂತಾಗಿದೆ.

ರೈತರು, ವ್ಯಾಪಾರಸ್ಥರು, ಜನಸಾಮಾನ್ಯರು, ಶಾಲಾ ಮಕ್ಕಳು, ರೋಗಿಗಳು, ವೃದ್ಧರು, ಅಟೋ ಚಾಲಕರ ಪರಿಸ್ಥಿತಿ ಹೇಳತೀರದಾಗಿದೆ. ಮಳೆಗಾಲವಾಗಿದ್ದರಿಂದ ಜನರು ನರಕಯಾತನೆ ಅನುಭವಿಸುತ್ತಾ ಪುರಸಭೆಗೆ ಹಿಡಿಶಾಪ ಹಾಕುತ್ತಿದ್ದಾರೆ. ಗುಣಮಟ್ಟದ ಕಾಮಗಾರಿಗಾಗಿ ಹೋರಾಟ ನಡೆದರೂ ಯಾವುದೇ ಪ್ರಯೋಜನವಾಗಿಲ್ಲ. ಶುಕ್ರವಾರದ ಸಂತೆ ದಿನವಂತೂ ಹೊರಗಿನಿಂದ ಬರುವ ಬೀದಿಬದಿ ವ್ಯಾಪಾರಸ್ಥರು ಎಲ್ಲೆಂದರಲ್ಲಿ ಅಂಗಡಿ ಹಚ್ಚುತ್ತಿದ್ದಾರೆ. ಇದರಿಂದಾಗಿ ಉಳಿದ ವ್ಯಾಪಾರಸ್ಥರಿಗೆ ತೊಂದರೆ ಆಗುತ್ತಿದೆ. ಶೀಘ್ರವೇ ರಸ್ತೆ ಕೆಲಸ ಮುಗಿಸಬೇಕು. ಇಲ್ಲದಿದ್ದರೆ ಬಜಾರದಲ್ಲೇ ರಸ್ತೆ ತಡೆ, ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ವೇಳೆ ಅಣ್ಣಪ್ಪ ಸಂಶಿ, ಮಲೀಕ, ದಾದಾಪೀರ ಸೇರಿ ಬಜಾರ್ ವ್ಯಾಪಾರಸ್ಥರು ಇದ್ದರು.


## ಗ್ರಾಮ ಪಂಚಾಯತ ಕಾರ್ಯಾಲಯ, ಅಬ್ಬಿಗೇರಿ

ತಾಲೂಕ : ರೋಣ e-mail : abbigeri.ron.gdg@gmail.com ಜಿಲ್ಲಾ : ಗದಗ

ನಂ:ಗ್ರಾ.ಪಂ./ಅಬ್ಬಿಗೇರಿ/ ಟೆಂಡರ/2025-26/ ದಿನಾಂಕ:18-07-2025

### ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ (ದ್ವಿ-ಲಕೋಟಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ/ ಸರಬುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2025-26ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ್ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತದೆ.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ |
|---|---|---|
| | RDPR/2024-25/IND10428 | ರೂ.6,07,460.34 |

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ: ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-19-07-2025 ರಿಂದ 29-07-2025 ರಂದು 16.00 ಗಂಟೆಯವರೆಗೆ. ತಾಂತ್ರಿಕ ಬಿಡ್ ಟೆಂಡರ ತೆರೆಯುವ ದಿನಾಂಕ: 30-07-2025 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 01-08-2025ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಅಬ್ಬಿಗೇರಿ**
**ತಾಲೂಕ: ರೋಣ, ಜಿಲ್ಲಾ ಗದಗ.**


# ಕಾಂಗ್ರೆಸ್ ಶಾಸಕರಿಗೆ ಮಾತ್ರ 50 ಕೋಟಿ ರೂಪಾಯಿ ಅನುದಾನ ಕೊಟ್ಟ ಸರ್ಕಾರ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾಂಗ್ರೆಸ್ ಶಾಸಕರ ಅಸಮಾಧಾನ ಶಮನಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಮುಖ ಕ್ರಮ ಕೈಗೊಂಡಿದ್ದು, ರಾಜ್ಯದ ಪ್ರತಿಯೊಬ್ಬ ಕಾಂಗ್ರೆಸ್ ಶಾಸಕರ ಕ್ಷೇತ್ರಕ್ಕೆ 50 ಕೋಟಿ ವಿಶೇಷ ಅನುದಾನ ಬಿಡುಗಡೆ ಮಾಡಲು ಆದೇಶಿಸಿದ್ದಾರೆ. ಈ ಅನುದಾನವನ್ನು ಮುಖ್ಯಮಂತ್ರಿಯ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಲಾಗಿದ್ದು, ಶಾಸಕರ ಕ್ಷೇತ್ರದ ಅಭಿವೃದ್ಧಿಗೆ ನೇರ ಬಂಡವಾಳದ ರೂಪದಲ್ಲಿದೆ.

ಈ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಜುಲೈ 30, 31ರಂದು ಶಾಸಕರ ಜತೆ ಸಭೆ ನಡೆಸಲಿದ್ದಾರೆ. ಶಾಸಕರು ಬೇಡಿಕೆ ಪತ್ರದೊಂದಿಗೆ ಕಾಮಗಾರಿ ವಿವರ ನೀಡಲು ಸೂಚನೆ ನೀಡಲಾಗಿದೆ. ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲ ಬೆಂಗಳೂರಿಗೆ ಬಂದು ಶಾಸಕರ ಹಾಗೂ ಸಚಿವರ ಜತೆ ಒನ್ ಟು ಒನ್ ಮಾತುಕತೆ ನಡೆಸಿದ ಬೆನ್ನಲ್ಲೇ ಸಿದ್ದರಾಮಯ್ಯ ಈ ಕ್ರಮ ಕೈಗೊಂಡಿದ್ದಾರೆ.



ಸಿದ್ದರಾಮಯ್ಯ ಪತ್ರದಲ್ಲೇನಿದೆ? '2025-26ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಘೋಷಿಸಲಾದ ಮುಖ್ಯಮಂತ್ರಿಯವರ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ತಮ್ಮ ವಿಧಾನಸಭಾ ಕ್ಷೇತ್ರಕ್ಕೆ 50 ಕೋಟಿ ರೂ.ಗಳ ವಿಶೇಷ ಅನುದಾನ ಹಂಚಿಕೆ ಮಾಡಲಾಗುವುದು.

ಮುಖ್ಯಮಂತ್ರಿಯವರಿಗೆ ಬರೆದ ತಮ್ಮ ಬೇಡಿಕೆ ಪತ್ರದೊಂದಿಗೆ, ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಕಾಮಗಾರಿಗಳ ವಿವರಗಳನ್ನು ನೀಡುವುದು. ದಿನಾಂಕ:30.07.2025 ಹಾಗೂ ದಿನಾಂಕ:31.07.2025ರಂದು ಜಿಲ್ಲಾವಾರು ವಿಧಾನಸಭಾ ಸದಸ್ಯರ ಸಭೆಯನ್ನು ಕೊಠಡಿ ಸಂಖ್ಯೆ-313, ಸಮಿತಿ ಕೊಠಡಿ, 3ನೇ ಮಹಡಿ, ವಿಧಾನಸೌಧ ಇಲ್ಲಿ ಏರ್ಪಡಿಸಲಾಗಿದೆ.

ಸದರಿ ಸಭೆಯ ವಿವರಗಳನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಮೇಲ್ಕಂಡಂತೆ ಕಾಮಗಾರಿಗಳ ವಿವರಗಳೊಂದಿಗೆ ಸಭೆಗೆ ಹಾಜರಾಗುವುದು' ಎಂದು ಸಿದ್ದರಾಮಯ್ಯ ಅವರ ಆದೇಶ ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಅನುದಾನ ಬಿಡುಗಡೆ ವಿಚಾರವಾಗಿ ಕಾಂಗ್ರೆಸ್‌ನ ಎಲ್ಲ ಶಾಸಕರಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಅದೇ ರೀತಿ, ಶಾಸಕಾಂಗ ಪಕ್ಷದ ಕಚೇರಿಯಿಂದಲೂ ಶಾಸಕರಿಗೆ ಮಾಹಿತಿ ರವಾನೆಯಾಗಿದೆ ಎಂದು ಮೂಲಗಳು ತಿಳಿಸಿವೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka